MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 238 | ಶನಿವಾರ : 05-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 238 | SATURDAY : 05-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಬಾಕಿ ಬಿಲ್ ಬಿಡುಗಡೆ ಮಾಡುವಂತೆ ಸರ್ಕಾರದ ಮುಂದೆ ಗುತ್ತಿಗೆದಾರರ ಕಣ್ಣೀರು

**ಬೆಂಗಳೂರು,ಜು.4–** ಕಳೆದ ಎರಡೂವರೆ ವರ್ಷಗ ಳಿಂದಲೂ ರಾಜ್ಯದಲ್ಲಿ ಗುತ್ತಿಗೆದಾರರ ಸಮಸ್ಯೆಗಳಿಗೆ ಸರಿಯಾದ ಸ್ಪಂದನೆ ಸಿಗುತ್ತಿಲ್ಲ. ಬಾಕಿ ಬಿಲ್‌ಗಳು ಬಿಡುಗಡೆಯಾಗುತ್ತಿಲ್ಲ ಎಂದು ಗುತ್ತಿಗೆದಾರರ ಸಂಘದ ಪದಾಧಿಕಾರಿಗಳು ಅಸಮಾಧಾನ ತೋಡಿ ಕೊಂಡಿದ್ದಾರೆ.

ಸಂಜೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಮಹತ್ವದ ಸಭೆ ನಡೆಯುವ ಹಿನ್ನೆಲೆಯಲ್ಲಿ ಇಂದು ಬೆಳಿಗ್ಗೆ ಸಂಘದ ಪದಾಧಿಕಾರಿಗಳು ಪೂರ್ವ ಭಾವಿ ಸಭೆ ನಡೆಸಿ ಚರ್ಚೆ ನಡೆಸಿದರು. ಪ್ರಮುಖವಾಗಿ ವಿವಿಧ ಇಲಾಖೆಗಳಿಂದ 34 ಸಾವಿರ ಕೋಟಿ ರೂ.ಗಳ ಬಿಲ್‌ಗಳು ಬಾಕಿ ಇದ್ದು, ಅದನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಲಾಗಿದೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲು ಗುತ್ತಿಗೆದಾರರ ಸಂಘದ ಪಾತ್ರ ಬಹಳ ಮುಖ್ಯವಾಗಿದೆ. ಶೇ.40ರಷ್ಟು ಕಮಿಷನ್



ಹಗರಣದ ಕುರಿತು ಗುತ್ತಿಗೆದಾರರ ಸಂಘ ಬರೆದ ಪತ್ರವನ್ನು ಆಧಾರವಾಗಿಟ್ಟುಕೊಂಡು ಕಾಂಗ್ರೆಸ್ ಪಕ್ಷ ಆಗಿನ ಬಿಜೆಪಿ ಸರ್ಕಾರದ ವಿರುದ್ಧ ನಿರಂತರ ಹೋರಾಟ ರೂಪಿಸಿತ್ತು. ಜನ ಕೂಡ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದರು. 2ನೇ ಪುಟಕ್ಕೆ

## ಬಿಜೆಪಿ ಭಿನ್ನಮತ ಶಮನಕ್ಕೆ ಜೋಷಿ ಕಸರತ್ತು

**ಬೆಂಗಳೂರು, ಜು. 4–** ರಾಜ್ಯ ಬಿಜೆಪಿಯಲ್ಲಿನ ಗುಂಪುಗಾರಿಕೆ, ಭಿನ್ನಮತ ಎಲ್ಲದಕ್ಕೂ ಪರಿಹಾರ ಕಂಡು ಕೊಳ್ಳುವ ನಿಟ್ಟಿನಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಯವರು ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿಂದು ಸಭೆ ನಡೆಸಿದರು.

ಬಿಜೆಪಿಯಲ್ಲಿನ ಜಿಲ್ಲಾ ಮಟ್ಟದ ಸಮಸ್ಯೆಗಳ ಪರಿಹಾರಕ್ಕೆ ಈ ಸಭೆ ನಡೆದಿದ್ದು, ಬಾಗಲಕೋಟೆ ಮತ್ತು ದಾವ ಣಗೆರೆ ಜಿಲ್ಲೆ ಬಿಜೆಪಿ ಸಮಸ್ಯೆ ಪರಿಹಾರ ಸಂಬಂಧ ಸ್ಥಳೀಯ ಮುಖಂಡರ ಜತೆ ಚರ್ಚೆ ನಡೆಸಲಾಯಿತು.

ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ, ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ, ಮಾಜಿ ಸಚಿವ ಸಿ.ಟಿ. ರವಿ ಸೇರಿದಂತೆ ಮುಖಂಡರುಗಳು ಬಾಗಲಕೋಟೆ ಮತ್ತು ದಾವಣಗೆರೆ ಜಿಲ್ಲಾ ಬಿಜೆಪಿ ಮುಖಂಡರುಗಳ ಜತೆ ಚರ್ಚೆ ನಡೆಸಿ ಭಿನ್ನಮತ ಶಮನಕ್ಕೆ ಪ್ರಯತ್ನ ನಡೆಸಿ ದರು.



ಬಾಗಲಕೋಟೆಯಲ್ಲಿ ಮಾಜಿ ಶಾಸಕ ವೀರಣ್ಣ ಚರಂತಿಮಠ ಮತ್ತು ವಿಧಾನ ಪರಿಷತ್ ಸದಸ್ಯ ಪಿ.ಹೆಚ್. ಪೂಜಾರ್ ಬಣಗಳು ಸೃಷ್ಠಿಯಾಗಿದ್ದು, ಇವರಿಬ್ಬರ ನಡುವಿನ ಜಟಾಪಟಿ ಸರಿಪಡಿಸಲು ಸಭೆ ನಡೆಸಲಾಯಿತು.

ಮೊದಲಿಗೆ ಮಾಜಿ ಶಾಸಕ ವೀರಣ್ಣ ಚರಂತಿ ಮಠ ಹಾಗೂ ಬೆಂಬಲಿಗರ ಜತೆ ಸಭೆ ನಡೆಸಿದ ಪ್ರಹ್ಲಾದ್ ಜೋಷಿಯವರು ನಂತರ ಪರಿಷತ್ ಸದಸ್ಯ ಪಿ.ಹೆಚ್. ಪೂಜಾರ್ ಮತ್ತು ಬೆಂಬಲಿಗರ ಜತೆ ಚರ್ಚೆ ನಡೆಸಿ ಸಮಸ್ಯೆಗಳಿಗೆ ಮದ್ದು ಅರೆಯುವ ಪ್ರಯತ್ನ ನಡೆಸಿದರು. 2ನೇ ಪುಟಕ್ಕೆ

## ವಿದ್ಯಾರ್ಥಿನಿಯ ಮೇಲೆ ಹರಿದ ಬಸ್ ಗಂಭೀರ ಗಾಯ

**ಯುವ ಮಾರ್ಗ ಸುದ್ದಿ**

ಲಿಂಗಸುಗೂರು,ಜು.4– ಪಟ್ಟಣದ ಬಸ್ಟಾಂಡ್ ದ್ವಾರದಲ್ಲಿ ಸಾರಿಗೆ ಬಸ್ಸಿನ ಚಕ್ರಕ್ಕೆ ಸಿಲುಕಿ ಯುವತಿಯೋರ್ವಳು ಕಾಲು ಕಳೆದುಕೊಂಡ ಘಟನೆ ಶುಕ್ರವಾರ ಸಂಜೆ ಜರುಗಿದೆ.ರಾಯಚೂರು ವಿಶ್ವವಿದ್ಯಾಲಯದಲ್ಲಿ ಎಂ ಕಾಮ್ ವ್ಯಾಸಾಂಗ ಮಾಡುತ್ತಿರುವ ತಾಲೂಕಿನ ಕೋತಾ ಗ್ರಾಮದ ವಿದ್ಯಾರ್ಥಿನಿ ಸರಸ್ವತಿ ತಂದೆ ಬಸವರಾಜ ಕೋತಾ ಎಂದು ಗಾಯಾಳುವನ್ನು ಗುರುತಿಸಲಾಗಿದೆ. ಮೊಹರಂ ಹಬ್ಬಕ್ಕೆಂದು ಊರಿಗೆ ತೆರಳುತ್ತಿದ್ದ ಕುಮಾರಿ ಸರಸ್ವತಿ ಲಿಂಗಸುಗೂರು ಬಸ್ಟಾಂಡ್‌ನಲ್ಲಿ ಬಸ್ ಹತ್ತುವಾಗಿ ಆಯತಪ್ಪಿ ಕೆಳಗೆ ಬಿದ್ದಿದ್ದಾಳೆ. ಚಾಲಕನ ಅಜಾಗರೂಕತೆಯಿಂದ ಬಸ್‌ನ ಚಕ್ರ ಬಲಗಾಲಿನ ಮೇಲೆ ಹರಿದಿದೆ. ಕಾಲು ನಜ್ಜುಗುಜ್ಜಾಗಿದ್ದು ಸ್ಥಳೀಯ ಸರಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗೆ ಬಾಗಲಕೋಟೆ ಖಾಸಗಿ ಆಸ್ಪತ್ರೆ ಕಳುಹಿಸಿದ್ದಾರೆ ಎಂಬ ಮಾಹಿತಿ ತಿಳಿದು ಬಂದಿದೆ.



ಸ್ಥಳಕ್ಕೆ ದೌಡಾಯಿಸಿದ ಪೋಲಿಸರು ಮಹಜರು ಮಾಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಅಂಬೇಡ್ಕರ್ ಪ್ರತಿಮೆಗೆ ಅಪಮಾನ ಖಂಡಿಸಿ ಪ್ರತಿಭಟನೆ

**ಯುವ ಮಾರ್ಗ ಸುದ್ದಿ**

**ಸಿರವಾರ,ಜು.4–** ತಾಲೂಕಿನ ಹರವಿ ಗ್ರಾಮದಲ್ಲಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆಗೆ ಕಿಡಿಗೇಡಿಗಳು ಅಪ ಮಾನ ಮಾಡಿದ್ದ ಘಟನೆಗೆ ಸಂಬಂಧಿಸಿದಂತೆ, ದಲಿತಪರ ಸಂಘಟನೆಗಳುಶುಕ್ರವಾರ ಪ್ರತಿ ಭಟನೆಯಲ್ಲಿ ಭಾಗವಹಿಸಿ ಕಿಡಿ ಗೇಡಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರ ಪ್ರತಿಮೆಗೆ ಅವಮಾನ ಮಾಡಿರುವ ಕೃತ್ಯ ಅತ್ಯಂತ ಹೇಯವಾದುದು. ಇದು ಕೇವಲ ಪ್ರತಿಮೆಗೆ ಮಾಡಿದ ಅವಮಾನವಲ್ಲ, ಬದ



ಲಾಗಿ ದೇಶದ ಸಂವಿಧಾನ ಮತ್ತು ಸಮಾನತೆಯ ಆಶಯಗಳಿಗೆ ಮಾಡಿದ ಅವಮಾನವಾಗಿದೆ" ಎಂದು ಖಂಡಿಸಿದರು.

ಈ ಕೃತ್ಯ ಎಸಗಿದ ಕಿಡಿಗೇಡಿಗಳನ್ನು ಆದಷ್ಟು ಬೇಗ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ತಾಲೂಕು ಆಡಳಿತ ಮತ್ತು ಪೊಲೀಸ್ ಇಲಾಖೆಯನ್ನು ಒತ್ತಾಯಿಸಲಾಯಿತು. "ಸಮಾಜದಲ್ಲಿ ಶಾಂತಿ ಕದಡುವ ಇಂತಹ ಶಕ್ತಿಗಳಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಪೊಲೀಸ್ ಇಲಾಖೆ ತಕ್ಷಣ ಕಾರ್ಯಪ್ರವೃತ್ತವಾಗಿ ತಪ್ಪಿತಸ್ಥರನ್ನು ಪತ್ತೆಹಚ್ಚಿ ಶಿಕ್ಷಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು" ಎಂದು ಎಚ್ಚರಿಕೆ ನೀಡಿದರು.ಈ ಸಂದರ್ಭದಲ್ಲಿ ದಲಿತಪರ ಸೇರಿದಂತೆ ವಿವಿಧ ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ಪರಿಶಿಷ್ಟ ವರ್ಗಗಳ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯ ಒದಗಿಸಲು :ಬಂಡೆಗುರು ಆಗ್ರಹ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.4–**ತಾಲೂಕಿನ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖ 'ಯ ವ್ಯಾಪ್ತಿಯಲ್ಲಿರುವ ಎಲ್ಲಾ ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳ ವಿವಿಧ ಸಮಸ್ಯೆಗಳನ್ನು ಬಗೆಹರಿಸಲು ಒತ್ತಾಯಿಸಿ ದಲಿತ ವಿದ್ಯಾರ್ಥಿ ಪರಿಷತ್ ತಾಲೂಕ 'ಸಮಿತಿ ಸಂಚಾಲಕರಾದ ಬಂಡೆಗುರು ಅವರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸರ್ಕಾರಗಳು ಶೈಕ್ಷಣಿಕ ಗುಣಮಟ್ಟವನ್ನು ಸುಧಾರಿಸಲು ಹಾಗೂ ವಿದ್ಯಾರ್ಥಿ ಯುವ ಜನರ ಬದುಕು ಕಟ್ಟಿಕೊಡಲು ಹಲವಾರು ಯೋಜನೆಗಳ ಮುಖಾಂತರ ಪ್ರಯತ್ನ ಪಡುತ್ತಿರುವ ಹಿನ್ನಲೆಯಲ್ಲಿ ಪರಿಶಿಷ್ಟ ವರ್ಗಗಳ ಇಲಾಖೆಯಂತಹ ದೊಡ್ಡ ಇಲಾಖೆಯು ಅದರ ಅಧೀನದಲ್ಲಿ ಹಲವಾರು ಸಾಮಾಜಿಕ, ಶೈಕ್ಷಣಿಕ ಕಾರ್ಯಕ್ರಮಗಳನ್ನು ಕೂಡ ಕೊಡುತ್ತಿದ್ದು, ಸದರಿ ಇಂತಹ ಯೋಜನಗಳು ಇಂದು ಸಮರ್ಪಕವಾಗಿ ವಿದ್ಯಾರ್ಥಿ ಯುವ ಜನರಿಗೆ ತಲುಪದೇ



ಅಧಿಕಾರಿಗಳ ದಿವ್ಯ ನಿರ್ಲಕ್ಷದಿಂದ ಹಳ್ಳ ಹಿಡಿಯುವ ಪರಸ್ಥಿತಿಗೆ ತಲುಪಿದ್ದು ವಿಪರ್ಯಾಸವಾಗಿದೆ. ಅದರ ಭಾಗವಾಗಿ ಮಾನವಿ ತಾಲೂಕಿಗೆ ಒಳಪಡುವ ಎಲ್ಲಾ ವಸತಿ ನಿಲಯದಲ್ಲಿ ವಿದ್ಯಾರ್ಥಿಗಳು ಹಲವಾರು ಸಮಸ್ಯೆಗಳನ್ನು 2ನೇ ಪುಟಕ್ಕೆ

## ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವ ದಿನ ದೂರವಿಲ್ಲ : ಲಕ್ಷ್ಮೀ ಹೆಬ್ಬಾಳಕರ್

**ಬೀದರ್,ಜು.4–**ಇಡೀ ದೇಶದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸದ್ಯ ಹಿನ್ನಡೆಯಾಗಿರಬಹುದು, ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವ ದಿನ ದೂರವಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ, ಮುಖಂಡರು ಹಾಗೂ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಕಾಂಗ್ರೆಸ್ ಪಕ್ಷಕ್ಕೆ ಕಾರ್ಯಕರ್ತರೇ ಜೀವಾಳ, 2ನೇ ಪುಟಕ್ಕೆ




## ಚತುಷ್ಪತ ರಸ್ತೆ ನಿರ್ಮಾಣ ಕಾಮಗಾರಿಗೆ ಅಧಿಕಾರಿಗಳಿಂದ ಸರಹದ್ದು ಗುರುತು

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.4–**ಪಟ್ಟಣದಲ್ಲಿ ಚತುಷ್ಪತ ರಸ್ತೆ ನಿರ್ಮಾಣ ಕಾಮಗಾರಿಗೆ ಕೆ.ಆರ್. ಡಿ.ಸಿ.ಎಲ್ ಅಧಿಕಾರಿಗಳು ಹಾಗೂ ಪುರಸಭೆ ಮುಖ್ಯಾಧಿಕಾರಿಗಳು ಹಾಗೂ ರಸ್ತೆ ನಿರ್ಮಾಣ ಸಂಸ್ಥೆಯ ಅಧಿಕಾರಿಗಳು ಸರಹದ್ದು ಗುರುತಿಸಿ ಗುರುತು ಹಾಕುವ ಕಾರ್ಯ ಕೈಗೊಳ್ಳಲಾಯಿತು.

ಕೆ.ಆರ್.ಡಿ.ಸಿ.ಎಲ್ ಇಲಾಖೆಯ ಎ.ಇ.ಇ. ಮಂಜುನಾಥ ಜವಳಿ ಮಾತನಾಡಿ, ಕಲ್ಮಲ ವೃತ್ತದಿಂದ ಸಿಂಧನೂರು ವರೆಗೆ ಚತುಷ್ಪತ ರಸ್ತೆ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗಿದ್ದು ಗ್ರಾಮೀಣ ಭಾಗದಲ್ಲಿ 59 ಕಿ.ಮೀ ರಸ್ತೆ ನಿರ್ಮಾಣ ವಾಗಲಿದ್ದು ರಸ್ತೆ ಮಧ್ಯದಿಂದ ಮಧ್ಯಕ್ಕೆ ಎಡ 22.5 ಮೀಟರ್ ಹಾಗೂ ಬಲಭಾಗದಲ್ಲಿ 22.5 ಮೀಟರ್ ಮಧ್ಯದಲ್ಲಿ ರಸ್ತೆ ವಿಭಾಜಕ ನಿರ್ಮಾಣ ಮಾಡಲಾಗುತ್ತಿದೆ. ಪಟ್ಟಣ ಪ್ರದೇಶದಲ್ಲಿ 18 ಕಿ.ಮಿ. ರಸ್ತೆ ಬರುತ್ತದೆ ರಸ್ತೆ ಮಧ್ಯದಿಂ



ದ ಮಧ್ಯಕ್ಕೆ ಎಡ 15 ಮೀಟರ್ ಹಾಗೂ ಬಲಭಾಗದಲ್ಲಿ 15 ಮೀಟರ್ ಮಧ್ಯದಲ್ಲಿ ರಸ್ತೆ ವಿಭಾಜಕ ಹಾಗೂ ಎರಡು ಬದಿಯಲ್ಲಿ ಚರಂಡಿ ನಿರ್ಮಾಣ ಮಾಡಲಾಗುತ್ತಿದೆ. ಇದುವರೆಗೂ ಗ್ರಾಮೀಣ ಭಾಗದಲ್ಲಿ ರಸ್ತೆ ನಿರ್ಮಾಣ ಮಾಡಲಾಗಿದ್ದು ರಸ್ತೆ ನಿರ್ಮಾಣಕ್ಕೆ ರೈತರಿಂದ ಅಗತ್ಯ ಭೂಮಿಯನ್ನು ಸ್ವಾದಿನ ಪಡೆಸಿಕೊಳ್ಳಲಾಗಿದ್ದು ಪಟ್ಟಣ ಪ್ರದೇಶದಲ್ಲಿ ಯಾವುದೆ ಸ್ಥಳವನ್ನು ಸ್ವಾದಿನ ಪಡಿಸಿಕೊಳ್ಳದೆ ರಸ್ತೆಯಿರುವ ಜಾಗದಲ್ಲಿಯೇ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ ಮಾತನಾಡಿ ಪಟ್ಟಣದಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗುತ್ತಿರುವುದರಿಂದ ಇಲಾಖೆಯಿಂದ ಗುರುತು ಹಾಕಿದ ಸ್ಥಳದ ವರೆಗೂ ಇರುವ ಕಟ್ಟಡ ಹಾಗೂ ಇತರೆ ನಿರ್ಮಾಣಮಾಡಿರುವ ಕಟೆ ಸೇರಿದಂತೆ ತಡೆಗೋಡೆಗಳನ್ನು ರಸ್ತೆ ಬದಿಯಲ್ಲಿನ ಡಬ್ಬಿ ಅಂಗಡಿಗಳನ್ನು ಸಾರ್ವಜನಿಕರು ಸ್ವಯಂಪ್ರೇರಿತರಾಗಿ ತೆರವುಗೊಳ್ಳಿಸುವ ಮೂಲಕ ರಸ್ತೆ ನಿರ್ಮಾಣ ಕಾಮಗಾರಿಗೆ ನಡೆಸುವುದಕ್ಕೆ ಸಹಕಾರ ನೀಡುವಂತೆ ಕೋರಿದರು.

ಕೆ.ಆರ್.ಡಿ.ಸಿ.ಎಲ್. ಎ.ಇ.ವಿನೋದ್, ರಸ್ತೆ ನಿರ್ಮಾಣ ಸಂಸ್ಥೆಯ ಪ್ರಾಜೆಕಟ್ ವ್ಯವಸ್ಥಾಪಕ ಎಂ.ವಿ.ವಿ.ಸುಬ್ರಹ್ಮಣ್ಯ ರಾವ್ ,ಪುರಸಭೆ ಆರೋಗ್ಯ ನಿರೀಕ್ಷಕರಾದ ಮಹೇಶ್,ಸೇರಿದಂತೆ ಪುರಸಭೆ ಸಿಬ್ಬಂದಿಗಳು ಇದ್ದರು.

## ವಕ್ಸ್ ಕಾಯ್ದೆ ತಿದ್ದುಪಡಿಗೆ ವಿರೋಧಿಸಿ ಮಾನವ ಸರಪಳಿ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.4–** ಕೇಂದ್ರ ಸರಕಾರ ಜಾರಿಗೆ ತರಲು ಹೊರಟಿರುವ ವಕ್ಸ್ ಕಾಯ್ದೆ ತಿದ್ದುಪಡಿ ವಿರೋಧಿಸಿ ಪಟ್ಟಣದ ಗಡಿಯಾರ ಚೌಕದಲ್ಲಿ ಶುಕ್ರವಾರ ಮುಸ್ಲಿಂ ಬಾಂಧವರು ಮಾನವ ಸರಪಳಿ ನಿರ್ಮಿಸಿ ಮೌನ ಪ್ರತಿಭಟನೆ ನಡೆಸಿದರು.

ಜಮಾತೆ ಉಲುಮಾ ಅಧ್ಯಕ್ಷ ಮುಫ್ತಿ ಸೈಯದ್ ಯೂನೂಸ್ ಖಾಸ್ಮಿ ಮಾತನಾಡಿ,




ವಕ್ಸ್ ಆಸ್ತಿ ನಮ್ಮ ಪೂರ್ವಜರು ನಮ್ಮ ಸಮಾಜದ ಹಿತಕ್ಕಾಗಿ ಕೊಟ್ಟಿರುವ ಸ್ವತ್ತು. ಇದನ್ನು ಬಡ ಕುಟುಂಬದವರಿಗೆ ಹಾಗೂ ಮುಸ್ಲಿಂ ಸಮುದಾಯದ ಹಿತ ಕಾಯಲು ಕಾಯ್ದಿರಿಸಲಾಗಿದೆ. ವಕ್ ತಿದ್ದುಪಡಿ ಕಾಯ್ದೆ ನಾವು ಬೇಡಿದ್ದಲ್ಲ. ಇದನ್ನು ಬಲವಂತವಾಗಿ ನಮ್ಮ ಮೇಲೆ ಹೇರಲಾಗುತ್ತಿದೆ. ಇದು ಕಾನೂನು ಬಾಹಿರ, ಸಂವಿಧಾನ ವಿರೋಧಿ ಕೃತ್ಯವಾಗಿದೆ. ಖಬರಸ್ತಾನ, ದರ್ಗಾ, ಮಸ್ಜಿದ್, ಮದರಸಾ, ಆಶಿರ್‌ಖಾನಾ ಎಲ್ಲವೂ ಮುಸ್ಲಿಂ ಸಮುದಾಯಕ್ಕೆ ದಾನ ಬಂದಂತಹ ಆಸ್ತಿ. ಇದರ ಮೇಲೆ ಕೇಂದ್ರ ಸರಕಾರ ಕಣ್ಣಿಟ್ಟಿದ್ದು, ಇದನ್ನು ರಾಷ್ಟ್ರವ್ಯಾಪಿ ಮುಸ್ಲಿಂರು ವಿರೋಧಿಸುತ್ತಿದ್ದಾರೆ. ಈಗಾಗಲೇ ಈ ಬಗ್ಗೆ ಸರ್ವೋಚ್ಚ ನ್ಯಾಯಾಲಯದಲ್ಲಿ ದಾವೆ ಹೂಡಿದ್ದು, ನಿರ್ಣಯ ನಮ್ಮ ಪರ 'ವಾಗಿ ಬರುವ ನಿರೀಕ್ಷೆ ಇದೆ ಎಂದರು.

# ಮೊದಲನೇಯ ಪುಟದಿಂದ

## ಬಿಜೆಪಿ ಭಿನ್ನಮತ ಶಮನಕ್ಕೆ ಜೋಷಿ ಕಸರತ್ತು

**ದಾವಣಗೆರೆ ಸಭೆ: ರೇಣುಕಾಚಾರ್ಯ ಭಾಗಿ:** ದಾವಣಗೆರೆ ಜಿಲ್ಲೆಯ ಬಿಜೆಪಿ ಬಣ ರಾಜಕೀಯವನ್ನು ಅಂತ್ಯಗೊಳಿಸಲು ಪ್ರಹ್ಲಾದ್ ಜೋಷಿಯವರು ಇಂದು ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ್ ವಿರೋಧಿ ಬಣದಲ್ಲಿ ಗುರುತಿಸಿಕೊಂಡಿರುವ ಮಾಜಿ ಸಚಿವ ರೇಣುಕಾಚಾರ್ಯ, ಎಸ್.ಎ. ರವೀಂದ್ರನಾಥ್, ಮಾಡಾಳು ವಿರೂಪಾಕ್ಷಪ್ಪ ಸೇರಿದಂತೆ ಹಲವು ಮುಖಂಡರುಗಳ ಜತೆಯೂ ಸಭೆ ನಡೆಸಿ ಭಿನ್ನಮತ ಶಮನದ ಕಸರತ್ತು ನಡೆಸಿದರು.

**ಪಕ್ಷ ವಿರೋಧಿ ಚಟುವಟಿಕೆ ನಡೆಸಿಲ್ಲ: ರೇಣುಕಾಚಾರ್ಯ:** ಪಕ್ಷದಲ್ಲಿನ ಭಿನ್ನಮತ ಶಮನಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ನಡೆಸಿರುವ ಸಭೆಗೂ ಮುನ್ನ ಸುದ್ದಿಗಾ ರರೊಂದಿಗೆ ಮಾತನಾಡಿದ ಮಾಜಿ ಸಚಿವ ರೇಣುಕಾಚಾರ್ಯ ಅವರು, ನಾನು ಪಕ್ಷ ವಿರೋಧಿ ಚಟುವಟಿಕೆ ನಡೆಸಿಲ್ಲ. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಹಾಗೂ ರಾಜ್ಯಾಧ್ಯಕ್ಷರ ವಿರುದ್ಧ ಕೆಲವರು ಮಾತನಾಡಿದ್ದರು. ಅಂತಹವರ ವಿರುದ್ಧ ನಾನು ಮಾತನಾಡಿದ್ದೇನೆ ಅಷ್ಟೇ. ಪಕ್ಷದ ನಾಯಕರ ವಿರುದ್ಧ ಮಾತನಾಡಿಲ್ಲ ಎಂದು ಹೇಳಿದರು. ನಾನು ಇಲ್ಲಿ ಬಲಾಬಲ ಪ್ರದರ್ಶನಕ್ಕೆ ಬಂದಿಲ್ಲ. ಕೇಂದ್ರ ಸಚಿವ ಪ್ರಹ್ಲಾದ್ ಜೋಷಿಯವರು ಸಭೆ ಕರೆದಿದ್ದಾರೆ. ಸಭೆಗೆ ಬಂದಿದ್ದೇವೆ. ಮಾಧ್ಯಮಗಳಲ್ಲಿ ರೇಣುಕಾಚಾರ್ಯ ಉಚ್ಚಾಟನೆ ಎಂದೆಲ್ಲಾ ಸುದ್ದಿ ಮಾಡಿಸಿದ್ದಾರೆ. ಇದು ಕಲಿಯುಗ, ಚಕ್ರವ್ಯೂಹ ಬೇಧಿಸಿ ಒಳಗೆ ಹೋಗುವ ಶಕ್ತಿ ನನಗೂ ಇದೆ. ಹಿರಿಯರು ಕರೆದು ಬ ಹಿರಂಗವಾಗಿ ಮಾತನಾಡಬೇಡಿ ಎಂದಿದ್ದಾರೆ. ಹಾಗಾಗಿ ಮಾ ತನಾಡುತ್ತಿಲ್ಲ. ಇದು ನನ್ನ ದೌರ್ಬಲ್ಯ ಅಲ್ಲ ಎಂದರು. ಲೋಕಸಭಾ ಚುನಾವಣೆಯಲ್ಲಿ ಸೋಲಿಗೆ ನಮ್ಮನ್ನು ದೂರು ತ್ತಿರುವುದು ಸರಿಯಲ್ಲ. ಮಾಜಿ ಸಂಸದ ಸಿದ್ದೇಶ್ವರ್ ಪತ್ನಿ ಸೋಲಿಗೆ ಸಿದ್ದೇಶ್ವರ್‌ರವರ ಸ್ವಯಂಕೃತ ಅಪರಾಧ ಕಾರಣ. ಇದನ್ನು ನಾನು ದಾಖಲೆ ಸಮೇತ ಜೋಷಿಯವರ ಮುಂದೆ ಇಡುತ್ತೇನೆ ಎಂದು ಅವರು ಹೇಳಿದರು.

## ಬಾಕಿ ಬಿಲ್ ಬಿಡುಗಡೆ ಮಾಡುವಂತೆ ಸರ್ಕಾರದ ಮುಂದೆ ಗುತ್ತಿಗೆದಾರರ ಕಣ್ಣೀರು

ಚುನಾವಣೆಗೂ ಮೊದಲು ಗುತ್ತಿಗೆದಾರರ ಸಂಘದ ಪದಾಧಿಕಾರಿಗಳೊಂದಿಗೆ ಚರ್ಚೆ ನಡೆಸುತ್ತಿದ್ದ ಕಾಂಗ್ರೆಸ್‌ನ ನಾಯಕರು ಎಲ್ಲಾ ಬೇಡಿಕೆಗಳಿಗೂ ಸಹಮತ ವ್ಯಕ್ತಪಡಿಸುವುದಾಗಿ ಹೇಳುತ್ತಿದ್ದರು. ತಮ ಸರ್ಕಾರ ಅಧಿಕಾರಕ್ಕೆ ಬಂದರೆ ಪರಿಹಾರ ದೊರಕಿಸುವ ಭರವಸೆಯನ್ನೂ ನೀಡುತ್ತಿದ್ದರು. ಆದರೆ ಅಧಿಕಾರಕ್ಕೆ ಬಂದ ಮೇಲೆ ಯಾವುದೂ ಬದಲಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಲಾಗಿದೆ.

ಗುತ್ತಿಗೆದಾರರ ಸಂಘದ ಬೇಡಿಕೆಗಳ ಬಗ್ಗೆ ಸರ್ಕಾರ ಅನಾಧಾರಣೆಗೊಳಿಸುತ್ತಿದೆ. ಬಾಕಿ ಬಿಲ್‌ಗಳಿಗೆ ನೆಪಗಳ ಮೇಲೆ ನೆಪಗಳನ್ನು ಹೇಳುತ್ತಿದೆ. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಸಮರ್ಪಕವಾದ ಅನುದಾನ ಮೀಸಲಿಡದೇ ಕಾಮಗಾರಿಗಳನ್ನು ಮಂಜೂರು ಮಾಡಲಾಗಿತ್ತು. ಅದಕ್ಕಾಗಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ಬಾಕಿ ಬಿಲ್‌ಗಳ ಹೊರೆ ಹೆಚ್ಚಾಗಿದೆ ಎಂದು ಹೇಳಲಾಗುತ್ತಿದೆ.ಪ್ರತೀ ಸರ್ಕಾರದಲ್ಲೂ ಇದು ಸಾಮಾನ್ಯ. ಸರ್ಕಾರದ ಬದಲಾದಾಗ ಹಿಂದಿನ ಆಡಳಿತದ ಬಿಲ್‌ಗಳನ್ನು ಇತ್ಯರ್ಥಪಡಿಸುವುದು ನಡೆದುಕೊಂಡು ಬಂದಿದೆ.ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಹೆಚ್ಚು ಒತ್ತು ನೀಡಿದ್ದು, ಅಭಿವೃದ್ಧಿ ಕಾಮಗಾರಿಗಳು ನೆನೆಗುದಿಗೆ ಬಿದ್ದಿವೆ. ಹೀಗಾಗಿ ಬಾಕಿ ಬಿಲ್‌ಗಳು ಇತ್ಯರ್ಥಗೊಳ್ಳುತ್ತಿಲ್ಲ. ಕಾಮಗಾರಿಗಳು ನಡೆಯುತ್ತಿಲ್ಲ ಎಂದು ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

34 ಸಾವಿರ ಕೋಟಿ ರೂ.ಗಳ ಬಿಲ್‌ಗಳನ್ನು ಇತ್ಯರ್ಥಪಡಿಸದೇ ಇದ್ದರೆ, ಜಿಲ್ಲಾಕೇಂದ್ರಗಳಲ್ಲಿ ಪ್ರತಿಭಟನೆ ನಡೆಸಲಾಗುತ್ತದೆ. ಭ್ರಷ್ಟಾಚಾರ ಕೂಡ ಎಂದಿನಂತೆ ಮುಂದುವರೆದಿದೆ ಎಂದು ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದ್ದು, ಇವಿಷ್ಟೂ ವಿಚಾರಗಳನ್ನು ಮುಖ್ಯಮಂತ್ರಿಯವರ ಗಮನಕ್ಕೆ ತರಬೇಕು ಎಂದು ಪದಾಧಿಕಾರಿಗಳು ಚರ್ಚಿಸಿದರು. ಈಗಾಗಲೇ ಹಲವಾರು ಸುತ್ತಿನ ಸಭೆಗಳಾಗಿವೆ. ಯಾವುದೇ ಪ್ರಯೋಜನವಾಗಿಲ್ಲ. ಸಭೆಗಳ ಮೇಲೆ ಸಭೆಗಳನ್ನು ನಡೆಸುವುದರಿಂದ ಯಾವುದೇ ಲಾಭ ಇಲ್ಲ. ಫಲಪ್ರದವಾದ ಫಲಿತಾಂಶಗಳಿದ್ದರೆ ಮಾತ್ರ ಸಭೆಯಲ್ಲಿ ಭಾಗವಹಿಸುವುದಾಗಿ ಈ ಬಾರಿ ಸರ್ಕಾರಕ್ಕೆ ಎಚ್ಚರಿಕೆ ನೀಡಬೇಕು ಎಂದು ಪದಾಧಿಕಾರಿಗಳು ಚರ್ಚಿಸಿದ್ದಾರೆ.

## ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವ ದಿನ ದೂರವಿಲ್ಲ : ಲಕ್ಷ್ಮೀ ಹೆಬ್ಬಾಳಕರ್

ಮಹಿಳೆಯರು, ಬಡವರ ಬಗ್ಗೆ ಯೋಚಿಸಿ ಕಾಂಗ್ರೆಸ್ ಪಕ್ಷ ಯೋಜನೆಗಳನ್ನು ರೂಪಿಸುತ್ತದೆ ಎಂದರು. ಕಳೆದ ಲೋಕಸಭಾ ಚುನಾವಣೆಯಲ್ಲಿ ಬೀದರ್ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷ ಜಯಭೇರಿ ಬಾರಿಸಿದೆ. ಕೇಂದ್ರ ಸರ್ಕಾರ ಬರೀ ಪೊಳ್ಳು ಭರವಸೆಯನ್ನು ಕೊಡುತ್ತಾ, ಜನ ಸಾಮಾನ್ಯರನ್ನು ವಂಚಿಸುತ್ತಾ ಬಂದಿದೆ. ಮುಂದಿನ ದಿನಗಳಲ್ಲಿ ಜನರೇ ಪಾಠ ಕಲಿಸುತ್ತಾರೆ ಎಂದು ಸಚಿವರು ಕಿಡಿಕಾರಿದರು. ಎಲ್ಲರ ಸಹಕಾರ ನಮ್ಮ ಪಕ್ಷದ ಮೇಲೆ ಇರಲಿ, ರಾಜ್ಯದ ಏಳು ಕೋಟಿ ಜನ ಸಂಖ್ಯೆಗೆ ಏಕೈಕ ಮಹಿಳಾ ಸಚಿವೆಯಾಗಿರುವೆ. ಸಾಮಾನ್ಯ ಕಾರ್ಯಕರ್ತೆಯಾಗಿದ್ದ ನನ್ನನ್ನು ಗುರುತಿಸಿ ಪಕ್ಷ ನನಗೆ ಟಿಕೆಟ್ ನೀಡಿತು. ಬ್ಲಾಕ್, ಜಿಲ್ಲಾ, ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆಯಾಗಿ ಕೆಲಸ ಮಾಡಿರುವೆ. ಎರಡು ಬಾರಿ ಸೋತರೂ ಪಕ್ಷ ನನ್ನನ್ನು ಗುರುತಿಸಿತು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.ಕಾರ್ಯಕರ್ತರ ವೈಯಕ್ತಿಕ ಕೆಲಸಗಳಿಗೆ ಹಾಗೂ ಸಮಸ್ಯೆಗಳಿಗೆ ನಾನು ಸದಾ ಸ್ಪಂದಿಸುವೆ. ಕಾಂಗ್ರೆಸ್ ಪಕ್ಷದ ಕಚೇರಿ ನಮ್ಮ ಪಾಲಿಗೆ ದೇವಾಲಯ ವಿದ್ದಂತೆ. ಎಲ್ಲರೂ ಪಕ್ಷಕ್ಕಾಗಿ ದುಡಿಯೋಣ, ಕೇಂದ್ರದಲ್ಲಿ ಮತ್ತೆ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರೋಣ ಎಂದರು. ಈ ವೇಳೆ ಮುಖಂಡರು ಹಾಗೂ ಕಾರ್ಯಕರ್ತರು ಆತ್ಮೀಯವಾಗಿ ಸನ್ಮಾನಿಸಿದರು. ಇದೇ ವೇಳೆ ಬಗರ್ ಹುಕುಂ ಸಮಿತಿಗೆ ಆಯ್ಕೆಗೊಂಡ ಸದಸ್ಯರನ್ನು ಸಚಿವರು ಸನ್ಮಾನಿಸಿದರು.ಈ ವೇಳೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ್ ಚಿಮಕೊಡೆ, ಮಾಜಿ ಸಂಸದ ನರಸಿಂಗರಾವ್ ಸೂರ್ಯವಂಶಿ, ಜಿಲ್ಲಾಧ್ಯಕ್ಷ ಬಸವರಾಜ್ ಜಾಬ್ ಶೆಟ್ಟಿ, ಯುವ ಮುಖಂಡರಾದ ಅನಿಲ್ ಬೆಲ್ದಾರ್, ದತ್ತು ಮುಲಗೆ, ಸಂಜಯ್ ಜಹಾಗೀರ್ ದಾರ್, ಶ್ರೀಕಾಂತ್ ಸ್ವಾಮಿ ಸೇರಿದಂತೆ ವಿವಿಧ ಘಟಕಗಳ ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಪರಿಶಿಷ್ಟ ವರ್ಗಗಳ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯ ಒದಗಿಸಲು :ಬಂಡೆಗುರು ಆಗ್ರಹ

ಎದುರಿಸುತ್ತಿರುವ ಗಂಭೀರ ಆರೋಪಗಳು ಕೂಡ ಕೇಳಿ ಬರುತ್ತಿವೆ. ವಿದ್ಯಾರ್ಥಿಗಳಿಗೆ ಕುಡಿಯಲು ಶುದ್ಧವಾದ ನೀರು ಸಿಗುತ್ತಿಲ್ಲ. ಪ್ರತಿ ತಿಂಗಳು ಪೇಪರ್ ಹಾಗೂ ಸ್ಪರ್ಧಾತ್ಮಕ ಮಾಸ ಪತ್ರಿಕೆಗಳು ಕೂಡ ಒದಗಿಸುತ್ತಿಲ್ಲ ಮತ್ತು ಗ್ರಂಥಾಲಯಗಳು ಇಲ್ಲದೇ ಇದ್ದರೂ ಅದರಲ್ಲಿ ಪುಸ್ತಕಗಳು ವಿದ್ಯಾರ್ಥಿಗಳಿಗೆ ಅನಾನುಕುಲವಾಗಿದೆ ಮೆನು ಪಟ್ಟಿ ಪ್ರಕಾರ ಊಟವು ದೊರಕದೆ ಹಾಜರಾತಿ ಮಾತ್ರ ನೂರಕ್ಕೆ ನೂರರನ್ನು ತಪ್ಪದೇ ಕೋಟಿ ಬಿಲ್ ಮಾಡಿಕೊಳುವ ಕಾಯಕದಲ್ಲಿ, ಅಧಿಕಾರಿಗಳು ಮುಂದಾಗಿದ್ದಾರೆ ಎನ್ನಲಾಗಿದೆ.

ಹಾಗೂ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಅನೇಕ ಬಾರಿ ವಸತಿ ನಿಲಯ ಮೇಲ್ವಿಚಾರಕರ ಗಮನಕ್ಕೆ ತರಲಾಗಿದೆ ಆದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಆರೋಪಿಸಿದರು. ಜೊತೆಗೆ ಎಲ್ಲಾ ವಸತಿ ನಿಲಯಗಳಲ್ಲಿ ದಿನಗೂಲಿ ನೌಕರರು ಹಾಗೂ ಅಡುಗೆ ಸಹಾಯಕರು ಮತ್ತು ಸಿಬ್ಬಂದಿಗಳನ್ನು ಟೆಂಡರ್ ಆಧಾರದಲ್ಲಿ ಅಥವಾ ಏಜೆನ್ಸಿ ಮುಖಾಂತರ ಆಯ್ಕೆ ಮಾಡುವ ನಿಯಮವಿದೆ. ಮತ್ತು ಅರ್ಹ ಫಲಾನುಭವಿಗಳನ್ನು ನೇಮಕ ಮಾಡುವಾಗ ಪತ್ರಿಕಾ ಪ್ರಕಟಣೆ ಹಾಗೂ ನೊಟೀಸ್ ಮತ್ತು ಜಾಹಿರಾತು ನೀಡುವ ನಿಯಮವಿದ್ದರೂ ಯಾವುದೇ ಅಧಿಕಾರಿಗಳು ನಿಯಮವನ್ನು ಪಾಲಿಸದೆ ಇರುವುದು ತಾವು ಈ ಅಕ್ರಮದಲ್ಲಿ ಭಾಗಿಯಾಗಿರುವುದಕ್ಕೆ ದೊಡ್ಡ ಸಾಕ್ಷಿಯಾಗಿದೆ.*

ತಾಲೂಕಿನ ಎಲ್ಲಾ ವಸತಿ ನಿಲಯಕ್ಕೆ ಭೇಟಿ ನೀಡಿ ಅಥವಾ ವಿಚಾರಣೆ ಮಾಡಲು ತಮ್ಮ ಇಲಾಖೆಯಿಂದ ಒಂದು ಕಮಿಟಿಯನ್ನು ರಚನೆ ಮಾಡಿ ವರದಿ ಮಾಡಿ ತಪ್ಪಿತಸ್ಥರ ಅಧಿಕಾರಿಗಳ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಬೇಕೆಂದು ದಲಿತ ವಿದ್ಯಾರ್ಥಿ ಪರಿಷತ್ ಆಗ್ರಹಿಸುತ್ತದೆ. ಒಂದು ವೇಳೆ ಮನವಿಗೆ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಜಿಲ್ಲಾಧಿಕಾರಿ ಕಚೇರಿ ಮುಂದೆ ಬೃಹತ್ ಧರಣಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

## ವಿಧಾನಪರಿಷತ್ ಸದಸ್ಯ ಎನ್.ರವಿಕುಮಾರ್‌ಗೆ ಮಾನಸಿಕ ಚಿಕಿತ್ಸೆ ಅಗತ್ಯವಿದೆ: ಸಚಿವ ಪ್ರಿಯಾಂಕ್ ಖರ್ಗೆ

**ಕಲಬುರಗಿ,ಜು.4–** ಸಿ.ಎಸ್.ವಿರುದ್ಧ ಅವಮಾನಕರ ಹೇಳಿಕೆ ನೀಡಿರುವ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ ಅವರನ್ನು ಎಕ್ಸ್ ಪೋಸ್‌ನಲ್ಲಿ ತರಾಟೆಗೆ ತೆಗೆದುಕೊಂಡಿರುವ ಸಚಿವ ಪ್ರಿಯಾಂಕ್ ಖರ್ಗೆ ಅವರು, ಎನ್.ರವಿಕುಮಾರ್ ಅವರಿಗೆ ಮಾನಸಿಕ ಚಿಕಿತ್ಸೆಯ ಅಗತ್ಯವಿದೆ ಎಂದಿದ್ದಾರೆ.

ಬಿಜೆಪಿಯವರು ಕೇಳುವ ಕ್ಷಮೆಯು ಪಶ್ಚಾತಾಪದ ಕ್ಷಮೆಯಲ್ಲ, ಪಲಾಯನವಾದದ ಕ್ಷಮೆ ಎನ್ನುವುದನ್ನು ನಾನು ಹಿಂದೆಯೇ ಹೇಳಿದ್ದೆ, ಕಲಬುರಗಿ ಜಿಲ್ಲಾಧಿಕಾರಿ ವಿರುದ್ಧ ನಾಲಿಗೆ ಹರಿಬಿಟ್ಟು ಕ್ಷಮೆ ಕೇಳಿದ್ದ ಬಿಜೆಪಿಯ ವಿಧಾನ ಪರಿಷತ್ ಸದಸ್ಯ ರವಿಕುಮಾರ್ ಅವರು ಈಗ ಮತ್ತೊಮ್ಮೆ ಸರ್ಕಾರದ ಮುಖ್ಯ ಕಾರ್ಯದರ್ಶಿ ವಿರುದ್ಧ ತಮ್ಮ ಮಲಿನ ಮನಸಿನ ಕೊಳಕು ನಾಲಿಗೆ ಹರಿಬಿಟ್ಟಿದ್ದಾರೆ.

ಮಹಿಳಾ ಅಧಿಕಾರಿಗಳನ್ನು ನಿಂದಿಸುವುದು ರವಿಕುಮಾರ್ ಅವರಿಗೆ ಚಟವಾಗಿ ಪರಿಣಮಿಸಿರುವ ಹಿನ್ನೆಲೆಯಲ್ಲಿ ಅವರಿಗೆ ಮಾನಸಿಕ ಚಿಕಿತ್ಸೆಯ ಅಗತ್ಯವಿದೆ ಎಂಬುದು ನನ್ನ ಭಾವನೆ. ಮಾಡಿದ ತಪ್ಪನ್ನೇ ಪದೇ ಪದೇ ಮಾಡುವುದು, ಮತ್ತೆ ಮತ್ತೆ ಕ್ಷಮೆ ಕೇಳುವುದು ಬಿಜೆಪಿಯವರಿಗೆ ಸಾವರ್ಕರಿಂದ ಬಂದ ರಕ್ತಗತ ಗುಣ ಇರಬಹುದು !. ಮಹಿಳಾ ಅಧಿಕಾರಿಗಳನ್ನೇ ಈ ಪರಿ ನಿಂದಿಸುವ ಬಿಜೆಪಿಯವರು ಸಾಮಾನ್ಯ ಮಹಿಳೆಯರನ್ನು ಹೇಗೆ ನಡೆಸಿ ಕೊಳ್ಳಬಹುದು ಸರ್ಕಾರದ ಮುಖ್ಯ ಕಾರ್ಯದರ್ಶಿ ವಿರುದ್ಧ ಬಾಯಿಗೆ ಬಂದಂತೆ ಮಾತನಾಡಿರುವ ರವಿಕುಮಾರ್ ಅವರು ಘನತೆಯುಕ್ತ ಪರಿಷತ್‌ನಲ್ಲಿ ಮುಂದುವರೆಯಲು ಅನರ್ಹರು. ರವಿಕುಮಾರ್ ಇರಬೇಕಾಗಿರುವುದು ಪರಿಷತ್‌ನಲ್ಲಿ ಅಲ್ಲ, ನಿಮ್ಹಾನ್ಸ್‌ನಲ್ಲಿ ಎಂದು ಕುಟುಕಿದ್ದಾರೆ.

## ಆಷಾಡ ಶುಕ್ರವಾರ : ರಾಜಕೀಯ ಹಾಗೂ ಸಿನಿಮಾ ಮಂದಿ ಸೇರಿದಂತೆ ಚಾಮುಂಡಿ ದರ್ಶನಕ್ಕೆ ಹರಿದುಬಂದ ಭಕ್ತಸಾಗರ



**ಮೈಸೂರು,ಜು.4–** ಎರಡನೇ ಆಷಾಡ ಶುಕ್ರವಾರ ಹಿನ್ನೆಲೆಯಲ್ಲಿ ನಾಡಿನ ಅಧಿದೇವತೆ ಚಾಮುಂಡೇಶ್ವರಿ ದರ್ಶನಕ್ಕೆ ಇಂದು ಭಕ್ತಸಾಗರವೇ ಹರಿದುಬಂದಿತ್ತು. ಇಂದು ಬೆಳಗ್ಗೆ 3.30ರಿಂದಲೇ ದೇವಿಗೆ ವಿವಿಧ ಅಭಿಷೇಕ, ಅರ್ಚನೆ, ಮಹಾಮಂಗಳಾರತಿ ಸೇರಿದಂತೆ ವಿಶೇಷ ಪೂಜಾ ಕೈಂಕರ್ಯಗಳು ನಡೆದವು. 6 ಗಂಟೆಯ ನಂತರ ಸಾರ್ವಜನಿಕರ ದರ್ಶನಕ್ಕೆ ಅನುಕೂಲ ಮಾಡಿಕೊಡಲಾಗಿದ್ದು, ಭಕ್ತರು ಸರದಿ ಸಾಲಿನಲ್ಲಿ ನಿಂತು ದೇವಿಯ ದರ್ಶನ ಪಡೆದರು.

ಲಕ್ಷ್ಮೀ ಅಲಂಕಾರದಲ್ಲಿ ಕಂಗೊಳಿಸಿದ ಚಾಮುಂಡೇಶ್ವರಿ ಇಂದು ದೇವಿಗೆ ಲಕ್ಷ್ಮೀ ಅಲಂಕಾರ ಮಾಡಲಾಗಿತ್ತು. ಇಡೀ ದೇವಾಲಯವನ್ನೇ ತೋತಾಪುರಿ ಮಾವಿನಕಾಯಿ, ಮಸುಕಿನ ಜೋಳ ಸೇರಿದಂತೆ ವಿವಿಧ ಬಗೆಯ ಫಲಪುಷ್ಪಗಳಿಂದ ಅಲಂಕಾರಗೊಳಿಸಿದ್ದು ಕಣ್ಣು ಕೋರೈಸುವಂತಿತ್ತು.

ಹರಕೆ ಹೊತ್ತ ಭಕ್ತಾದಿಗಳು ಮುಂಜಾನೆಯಿಂದಲೇ ಬೆಟ್ಟದ ಮೆಟ್ಟಿಲುಗಳನ್ನು ಏರಿ ದೇವಿಯ ದರ್ಶನ ಪಡೆದು ಪುನೀತರಾದರು.

ಬೆಳಿಗ್ಗೆ 5 ಗಂಟೆಯಿಂದ ಸಂಜೆ 6 ಗಂಟೆವರೆಗೆ ಮಾತ್ರ ಮೆಟ್ಟಿಲು ಮೂಲಕ ಸಾಗಲು ಅವಕಾಶ ಕಲ್ಪಿಸಲಾಗಿತ್ತು. ಇಂದು ಬೆಳಗಿನ ಜಾವ 4 ಗಂಟೆಯಿಂದಲೇ ಬೆಟ್ಟದ ಮೆಟ್ಟಿಲುಗಳ ಮುಂದೆ ಜನರು ಸಾಲುಗಟ್ಟಿ ನಿಂತಿದ್ದರು. ಗೇಟ್ ತೆಗೆಯುತ್ತಿದ್ದಂತೆ ಉತ್ಸಾಹದಿಂದ ಮೆಟ್ಟಿಲುಗಳನ್ನು ಹತ್ತಿ ದೇವಿಯ ದರ್ಶನ ಪಡೆದಿದ್ದಾರೆ.

ಉಳಿದ ಆಷಾಡ ಶುಕ್ರವಾರಗಳಲ್ಲಿ ಮೆಟ್ಟಿಲು ಹತ್ತಿ ಬರುವ ಭಕ್ತರಿಗೆ ಧರ್ಮದರ್ಶನದ ಸರತಿ ಸಾಲಿನಲ್ಲಿ ನಿಂತು ದರ್ಶನ ಮಾಡಬಹುದಾಗಿದೆ. ನಾಡದೇವಿಯ ಸುಗಮ ದರ್ಶನಕ್ಕಾಗಿ ಲಲಿತ ಮಹಲ್ ಪ್ಯಾಲೇಸ್ ಆವರಣದಿಂದ ಉಚಿತ ಬಸ್ ಸೇವೆ ಕಲ್ಪಿಸಲಾಗಿತ್ತು.

**ಗಣ್ಯರ ಭೇಟಿ:** ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಶಾಸಕ ಎಚ್.ಡಿ.ರೇವಣ್ಣ, ಜಿ.ಟಿ.ಹರೀಶ್ ಗೌಡ ಸೇರಿದಂತೆ ಹಲವು ಜನಪ್ರತಿನಿಧಿಗಳು ಕುಟುಂಬ ಸಮೇತ ದೇವಿಯ ದರ್ಶನ ಪಡೆದರು.

**ದೇವಿ ದರ್ಶನ ಪಡೆದ ನಟ ದರ್ಶನ್:** ಸ್ಯಾಂಡಲ್‌ವುಡ್ ನಟರಾದ ದರ್ಶನ್, ಡಾಲಿ ಧನಂಜಯ ಸೇರಿದಂತೆ ಅನೇಕ ಕಲಾವಿದರು ಕುಟುಂಬ ಸಮೇತರಾಗಿ ದೇಗುಲಕ್ಕೆ ಭೇಟಿ ನೀಡಿ ದೇವಿ ದರ್ಶನ ಪಡೆದರು. ಮುಂಜಾಗ್ರತಾ ಕ್ರಮವಾಗಿ ಪೊಲೀಸರು ಬಿಗಿ ಬಂದೋಬಸ್ತ್ ಕಲ್ಪಿಸಿದ್ದರು. ಜನಸಮೂಹವನ್ನು ನಿಯಂತ್ರಿಸಲು ಹರಸಾಹಸ ಪಡಬೇಕಾಯಿತು.

## ಪಕ್ಷದ್ರೋಹ ಮಾಡುವುದು ಕಾಂಗ್ರೇಸ್ ಸಂಸ್ಕೃತಿಯಾಗಿದೆ: ಸೋಮನಾಥ ಪಾಟೀಲ




**ಬೀದರ:ಜು.4–** ಕಾಂಗ್ರೆಸ್ ಪಕ್ಷ ದೇಶದಲ್ಲಿ ಮುಳಗುತ್ತಿರುವ ಹಡಗು. ಅದೊಂದು ಸುಡುವ ಮತ್ತು ವಿಭಜನೆಯ ಮನೆಯಾಗಿದೆ. ಪಕ್ಷದ್ರೋಹ ಮಾಡುವುದು ಕಾಂಗ್ರೆಸ್ ಸಂಸ್ಕೃತಿಯಾಗಿದೆಯೇ ವಿನಃ ಬಿಜೆಪಿ ಸಂಸ್ಕೃತಿಯಲ್ಲಿ ಇಲ್ಲ ಎಂದು ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಹುಡಗಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬಿಜೆಪಿ ವತಿಯಿಂದ ಕರೆದ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿದ ಅವರು ಈ ಹಿಂದೆ ಜೆಡಿಎಸ್‌ನ ಬಾಬುರಾವ ಗುದಗೆ ಅವರಿಗೆ ಕಾಂಗ್ರೆಸ್‌ನ ಈಶ್ವರ ಖಂಡ್ರೆ ಬೆಂಬಲ ಸೂಚಿಸಿದ್ದರು. ದಿ. ಬಸವರಾಜ ಪಾಟೀಲ ಅವರು ಹುಮನಾಬಾದನಲ್ಲಿ ಬಿಜೆಪಿ ಅಭ್ಯರ್ಥಿಯಾಗಿದ್ದಾಗ ಕಾಂಗ್ರೆಸ್‌ನ ರಾಜಶೇಖರ ಪಾಟೀಲ ಅವರು ಬಿಜೆಪಿಗೆ ಬೆಂಬಲ ಸೂಚಿಸಿದ್ದರು.

ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿದ್ದ ರಾಜಶೇಖರ ಪಾಟೀಲರ ಚಿಕ್ಕಪ್ಪ ವೀರಣ್ಣ ಪಾಟೀಲರಿಗೆ ಬೆಂಬಲ ಸೂಚಿಸಿ ಅಲ್ಲಿಯೂ ರಾಜಶೇಖರ ಪಾಟೀಲರು ಪಕ್ಷದ್ರೋಹ ಮಾಡಿದ್ದರು. ಹೀಗೆ ಪಕ್ಷದ್ರೋಹದ ಎಂಬುದು ಕಾಂಗ್ರೆಸ್ ಸಂಸ್ಕೃತಿಯಲ್ಲಿದೆಯೇ ವಿನಃ ಬಿಜೆಪಿ ಪಕ್ಷದಲ್ಲಿಲ್ಲ. ಇಂದು ಕಾಂಗ್ರೆಸ್‌ನವರು ಬಿಜೆಪಿ ಶಾಸಕರ ಮೇಲೆ ಮಾಡುತ್ತಿರುವ ಆರೋಪ ಸತ್ಯಕ್ಕೆ ದೂರವಾದುದು ಎಂದರು. ಜಿಲ್ಲಾಡಳಿತ ನೆಲಕಚ್ಚಿಹೋಗಿದೆ. ಹಾಡುಹಗಲೇ ದರೋಡೆ ನಡೆಯುತ್ತಿವೆ. ಉಸ್ತುವಾರಿ ಸಚಿವರ ಕ್ಷೇತ್ರದಲ್ಲಿಯೇ ಮರಳು ಮಾಫಿಯಾ ನಡೆಯುತ್ತಿದೆ. ಎಲ್ಲಾ ರಂಗದಲ್ಲಿಯೇ ಭಾಲ್ಕಿ ಕ್ಷೇತ್ರದವರನ್ನೇ ನೇಮಕ ಮಾಡಿಕೊಳ್ಳುತ್ತಿರುವ ವಿಷಯ ನಾವು ಕಳೆದ ಒಂದೂವರೆ ವರ್ಷದಿಂದ ಹೇಳಿಕೊಂಡು ಬರುತ್ತಿದ್ದೇವೆ. ಆದರೆ ಕಾಂಗ್ರೆಸ್ ಪಕ್ಷದವರು ಇಂದು ಹೇಳುತ್ತಿದ್ದಾರೆ ಎಂದರು.

ಬಿಜೆಪಿಯವರು ಈಶ್ವರ ಖಂಡ್ರೆ ಮನೆಗೆ ಹೋಗಿದ್ದು ವಯೋವೃದ್ಧ ಭೀಮಣ್ಣ ಖಂಡ್ರೆಯವರ ಮನೆಗೆ ಆರೋಗ್ಯ ವಿಚಾರಿಸಲು ಹೋಗಿದ್ದಾರೆ. ಅದನ್ನೇ ನೆಪ ಮಾಡಿಕೊಂಡು ಕಾಂಗ್ರೆಸ್ ಮುಖಂಡರು ಆರೋಪ ಮಾಡುತ್ತಿರುವುದನ್ನು ನೋಡಿದರೆ ಅವರು ಮಾನವೀಯತೆಯನ್ನೇ ಕಳೆದುಕೊಂಡಿದ್ದಾರೆ ಎನಿಸುತ್ತಿದೆ ಎಂದು ಪಾಟೀಲ ಗುಡುಗಿದರು.

ಔರಾದ ಶಾಸಕ ಪ್ರಭು ಚವ್ಹಾಣ ಮಾತನಾಡಿ ಮಾಜಿ ಶಾಸಕ ರಾಜಶೇಖರ ಪಾಟೀಲ ಅವರು 2023ರ ಚುನಾವಣೆಯಲ್ಲಿ ಸೋಲು ಅನುಭವಿಸಿದ್ದಾರೆ. ಈಗ ಮಾಡಲು ಅವರಿಗೆ ಕೆಲಸ ಏನೂ ಇಲ್ಲ. ಹೀಗಾಗಿ ಬಿಜೆಪಿ ಮುಖಂಡರ ಮೇಲೆ ಆರೋಪ ಮಾಡುತ್ತ ಕುಳಿತಿದ್ದಾರೆ ಎಂದು ಪಾಟೀಲ ಅವರ ಕಾಲೆಳೆದರು.

ಬೀದರ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಮಾತನಾಡಿ ಕಾಂಗ್ರೆಸ್ ಪಕ್ಷದ ಒಳಜಗಳ ತಂದು ಬಿಜೆಪಿ ಮೇಲೆ ಹಾಕುತ್ತಿದ್ದಾರೆ. ಸಚಿವ ಈಶ್ವರ ಖಂಡ್ರೆಯವರಿಗೆ ನೇರವಾಗಿ ಮಾತನಾಡಲು ಆಗದ ಕಾಂಗ್ರೆಸ್‌ನ ರಾಜಶೇಖರ ಪಾಟೀಲ ಹಾಗೂ ಅರವಿಂದ ಅರಳಿಯವರು ಬಿಜೆಪಿ ಶಾಸಕರ ಹೆಗಲ ಮೇಲೆ ಬಂದೂಕು ಇಟ್ಟ ಈಶ್ವರ ಖಂಡ್ರೆಯವರಿಗೆ ಹೊಡೆಯುತ್ತಿದ್ದಾರೆ. ನಿಮ್ಮ ಜಗಳ ನೀವು ಸರಿಪಡಿಸಿಕೊಳ್ಳಿ ಎಂದರು.

ಶಾಸಕ ಶರಣ ಸಲಗರ ಮಾತನಾಡಿ ಜಿಲ್ಲೆಯ ಕಾಂಗ್ರೆಸ್ ಪಕ್ಷದಲ್ಲೇ ಒಬ್ಬರ ನಡುವೆ ಒಬ್ಬರಿಗೆ ಹೊಂದಾಣಿಕೆ ಇಲ್ಲ. ಹೀಗಾಗಿ ಮತ್ತೆ 2028ರಲ್ಲಿ ಕಾರ್ಯಕರ್ತರ ಶಕ್ತಿಯೊಂದಿಗೆ ಬಿಜೆಪಿ ಆರಕ್ಕೆ ಆರೂ ಕ್ಷೇತ್ರದಲ್ಲಿ ಗೆಲ್ಲಲಿದೆ ಎಂದು ಭರವಸೆ ವ್ಯಕ್ತಪಡಿಸಿದರು. ಇದೇ ವೇಳೆ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಮಾಧ್ಯಮ ಪ್ರತಿನಿಧಿ ಶ್ರೀನಿವಾಸ ಚೌಧರಿ, ಬಸವರಾಜ ಪವಾರ್, ನಗರ ಘಟಕದ ಅಧ್ಯಕ್ಷ ಶಶಿ ಹೊಸಳ್ಳಿ ಸೇರಿದಂತೆ ಹಲವರಿದ್ದರು.

## ಆರ್‌ಸಿಬಿ ವಿಜಯೋತ್ಸವ ದುರಂತ : ತಿಂಗಳು ಕಳೆದರೂ ಸಂತ್ರಸ್ತರಿಗೆ ಸಿಕ್ಕಿಲ್ಲ ಪರಿಹಾರ

**ಬೆಂಗಳೂರು,ಜು.4–** ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ಕ್ರೀಡಾಂಗಣದಲ್ಲಿ ನಡೆದ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ವಿಜಯೋತ್ಸವ ಕಾರ್ಯಕ್ರಮದಲ್ಲಿ 11 ಜನರು ಸಾವನ್ನಪ್ಪಿ, ಹಲವರು ಗಾಯಗೊಂಡ ದುರಂತ ಸಂಭವಿಸಿ ಒಂದು ತಿಂಗಳು ಕಳೆದರೂ ಸಂತ್ರಸ್ತ ಕುಟುಂಬಗಳಿಗೆ ಇನ್ನೂ ಯಾವುದೇ ಪರಿಹಾರ ಸಿಕ್ಕಿಲ್ಲ.

ಆಶ್ವಾಸನೆ ಇಲ್ಲವೇ ಘೋಷಣೆ ಎಂಬುದು ಕೇವಲ ಕಾಗದದ ಮೇಲೆ ಉಳಿದಿದೆಯೇ ಹೊರತು ಒಂದು ತಿಂಗಳು ಮುಗಿದಿದ್ದರೂ ಕಾರ್ಯರೂಪಕ್ಕೆ ಬಂದಿಲ್ಲ ಎಂಬುದು ನೊಂದ ಕುಟುಂಬಗಳ ಆಕ್ರಂದನವಾಗಿದೆ. 2024ರ ಇಂಡಿಯನ್ ಪ್ರಿಮಿಯರ್ ಲೀಗ್‌ನಲ್ಲಿ ಮೊದಲ ಬಾರಿಗೆ ವಿಜೇತರಾದ ಆರ್‌ಸಿಬಿ ವಿಜಯೋತ್ಸವದ ವೇಳೆ ನಗರದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆಚರಿಸಲು ಭಾರೀ ಜನಸಮೂಹ ಸೇರಿದ್ದಾಗ ಈ ಘಟನೆ ಸಂಭವಿಸಿತ್ತು.

ಜನಸಂದಣಿಯ ಕಳಪೆ ನಿರ್ವಹಣೆ ಮತ್ತು ಸರಿಯಾದ ವ್ಯವಸ್ಥೆಗಳ ಕೊರತೆಯಿಂದಾಗಿ ಪ್ರವೇಶ ದ್ವಾರಗಳ ಬಳಿ ಕಾಲ್ತುಳಿತ ಸಂಭವಿಸಿ 11 ಜನರು ಸಾವನ್ನಪ್ಪಿದ್ದರು. ಅವರಲ್ಲಿ ಹಲವರು ಯುವ ಅಭಿಮಾನಿಗಳು ಮತ್ತು ದಿನಗೂಲಿ ಕಾರ್ಮಿಕರು ಸೇರಿದ್ದರು.

ಈ ಘಟನೆಯೂ ರಾಷ್ಟ್ರವ್ಯಾಪಿ ಆಕ್ರೋಶವನ್ನು ಹುಟ್ಟುಹಾಕಿ ಕಾರ್ಯಕ್ರಮದ ಸುರಕ್ಷತೆ ಮತ್ತು ಹೊಣೆಗಾರಿಕೆಯ ಬಗ್ಗೆ ಗಂಭೀರ ಕಳವಳಗಳನ್ನು ಹುಟ್ಟುಹಾಕಿತ್ತು.ಘಟನೆಯ ನಂತರ ಆರ್‌ಸಿಬಿ ಮೃತ ಬಲಿಪಶುಗಳ ಕುಟುಂಬಗಳಿಗೆ ತಲಾ 10 ಲಕ್ಷ ಪರಿಹಾರವನ್ನು ಘೋಷಿಸಿತು. ಕೆಎಸ್‌ಸಿಎ ನಂತರ ಪ್ರತಿ ಕುಟುಂಬಕ್ಕೆ 5 ಲಕ್ಷ ಹೆಚ್ಚುವರಿ ಭರವಸೆ ನೀಡಿತ್ತು. ಎರಡೂ ಪ್ರಕಟಣೆಗಳನ್ನು ಮಾಧ್ಯಮಗಳಲ್ಲಿ ವ್ಯಾಪಕವಾಗಿ ಹಂಚಿಕೊಳ್ಳ ಲಾಗಿತ್ತು. ಇದಕ್ಕಾಗಿ ಸಾರ್ವಜನಿಕರು ಜವಾಬ್ದಾರಿ ಮತ್ತು ಸಹಾನು ಭೂತಿಯ ಸೂಚಕವಾಗಿ ಪ್ರಶಂಸಿಸಿದ್ದರು.

ಆದಾಗ್ಯೂ ಒಂದು ತಿಂಗಳು ಕಳೆದರೂ, ಒಂದೇ ಒಂದು ಕುಟುಂಬಕ್ಕೆ ಭರವಸೆ ನೀಡಿದ ಬೆಂಬಲ ಸಿಕ್ಕಿಲ್ಲ. ಪರಿಹಾರ ವಿತರಣೆಯ ಕುರಿತು ಆರ್ಸಿಬಿ ಅಥವಾ ಕೆಎಸ್‌ಸಿಎ ಯಾವುದೇ ಹೇಳಿಕೆಗಳು ಅಥವಾ ಸಮಯವನ್ನು ನಿಗ ಮಾಡಿಲ್ಲ. ಇದು ದುಃಖಿತ ಕುಟುಂಬಗಳ ದುಃಖವನ್ನು ಮತ್ತಷ್ಟು ಹೆಚ್ಚಿಸಿದೆ.ಆರ್‌ಸಿಬಿ ಮತ್ತು ಕೆಎಸ್‌ಸಿಎಗಳನ್ನು ಹೊಣೆಗಾರರನ್ನಾಗಿ ಮಾಡಲು ಕರ್ನಾಟಕ ಸರ್ಕಾರ ಮತ್ತು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಮಧ್ಯಪ್ರವೇಶಿಸಬೇಕೆಂದು ಹಲವರು ಒತ್ತಾಯಿಸುತ್ತಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಮುಂಬೈನಲ್ಲಿ ಕಬೂತರ್ ಖಾನಗಳನ್ನು ತಕ್ಷಣವೇ ಮುಚ್ಚುವಂತೆ ಆದೇಶ



**ಮುಂಬೈ,ಜು.4–** ನಗರದಲ್ಲರುವ ಕಬೂತರ್ ಖಾನ(ಪಾರಿವಾಳಗಳಿಗೆ ಆಹಾರ ನೀಡುವ ಸ್ಥಳಗಳನ್ನು ತಕ್ಷಣವೇ ಮುಚ್ಚುವಂತೆ ಮಹಾರಾಷ್ಟ್ರ ಸರ್ಕಾರವು ಬೃಹದ್ಮುಂಬೈ ಮುನ್ಸಿಪಲ್ ಕಾರ್ಪೊರೇಷನ್‌ಗೆ ಆದೇಶಿಸಿದೆ.

ಮಹಾರಾಷ್ಟ್ರ ವಿಧಾನ ಪರಿಷತ್ತಿನಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದ ಶಿವಸೇನಾ ನಾಯಕಿ ಮತ್ತು ನಾಮನಿರ್ದೇಶಿತ ಎಂಎಲ್‌ಸಿ ಮನೀಷಾ ಕಾಯಂಡೆ, ಈ ಕಬೂತರ್ ಖಾನಗಳು ಸುತ್ತಮುತ್ತಲಿನ ಜನರಿಗೆ ಅಪಾಯವನ್ನುಂಟುಮಾಡುತ್ತವೆ, ಅವುಗಳ ತ್ಯಾಜ್ಯ ಮತ್ತು ಗರಿಗಳಿಂದ ಉಸಿರಾಟದ ಕಾಯಿಲೆಗಳಿಗೆ ಕಾರಣವಾಗುತ್ತವೆ ಎಂದು ಹೇಳಿದರು.

ಪರಿಷತ್ತಿನ ಮತ್ತೊಬ್ಬ ನಾಮನಿರ್ದೇಶಿತ ಸದಸ್ಯೆ ಬಿಜೆಪಿ ನಾಯಕಿ ಚಿತ್ರಾ ವಾಘ್, ಪಾರಿವಾಳ ಮಲದಿಂದ ಉಂಟಾಗುವ ಉಸಿರಾಟದ ಕಾಯಿಲೆಗಳಿಂದಾಗಿ ತನ್ನ ಚಿಕ್ಕಮ್ಮನನ್ನು ಕಳೆದುಕೊಂಡಿದ್ದೇನೆ. ಎಂದು ಹೇಳಿದರು.

ಮೌಖಿಕ ಪ್ರತಿಕ್ರಿಯೆಯಲ್ಲಿ ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಉತ್ತರಿಸುತ್ತಾ, ನಗರದಲ್ಲಿ 51 ಕಡೆ ಕಬೂತರ್ ಖಾನಗಳು ಇವೆ ಎಂದು ಹೇಳಿದರು. ಒಂದು ತಿಂಗಳೊಳಗೆ ಇದರ ಬಗ್ಗೆ ಕ್ರಮ ಕೈಗೊಳ್ಳಲು ಅವಕಾಶ ನೀಡಿ ಮತ್ತು ಕಬೂತರ್ ಖಾನಗಳನ್ನು ಮುಚ್ಚುವ ಪ್ರಕ್ರಿಯೆಯನ್ನು ತಕ್ಷಣ ಪ್ರಾರಂಭಿಸಲು ಬಿಎಂಸಿಗೆ ನಿರ್ದೇಶನಗಳನ್ನು ನೀಡಲಾಗುವುದು ಎಂದು ಅವರು ಹೇಳಿದರು.

ಪಾರಿವಾಳಗಳಿಗೆ ಆಹಾರ ನೀಡುವುದರಿಂದ ಉಂಟಾಗುವ ಅಪಾಯಗಳ ಬಗ್ಗೆ ಜಾಗೃತಿ ಮೂಡಿಸುವ ಅವಶ್ಯಕತೆಯಿದೆ ಎಂದು ಸಮಂತ್ ಹೇಳಿದರು.ಗಿರ್ಗಾಮ್ ಚೌಪಟ್ಟಿಯಲ್ಲಿ ಕೆಲವು ಪಾರಿವಾಳಗಳು ಪಿಜ್ಜಾ ಮತ್ತು ಬರ್ಗರ್‌ಗಳನ್ನು ಸಹ ತಿನ್ನುತ್ತವೆ ಎಂದು ಬಿಎಂಸಿ ಕಂಡುಹಿಡಿದಿದೆ ಎಂದು ಅವರು ಹೇಳಿದರು.

ದಾದರ್‌ನ ಪ್ರಸಿದ್ಧ ಕಬೂತರ್ ಖಾನನನ್ನು ಎರಡು ದಿನಗಳ ಕಾಲ ಮುಚ್ಚಲಾಗಿತ್ತು. ಆದರೆ ಜನರು ಪಕ್ಷಿಗಳಿಗೆ ಆಹಾರವನ್ನು ನೀಡುತ್ತಲೇ ಇದ್ದ ಹಿನ್ನಲೆಯಲ್ಲಿ ಅದು ಮತ್ತೆ ಪ್ರಾರಂಭವಾಯಿತು.ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರವಾಗಿ, ಶಿಂಧೆ, ಸಾಂತಕ್ರೂಜ್ ಪೂರ್ವ ಮತ್ತು ದೌಲತ್ ನಗರ ಮತ್ತು ಸಾಂತಕ್ರೂಜ್ ಪಶ್ಚಿಮದಲ್ಲಿ ಆನಧಿಕೃತ ಕಬೂತರ್ ಕಾನಗಳನ್ನು ಮುಚ್ಚಲಾಗಿದೆ ಎಂದು ಹೇಳಿದರು.ಬಿಎಂಸಿ ಈ ಸ್ಥಳಗಳಲ್ಲಿ ಸಂಚಾರ ದ್ವೀಪ ಮತ್ತು ಮಿಯಾವಾಕಿ ಉದ್ಯಾನಗಳನ್ನು ರಚಿಸಿದೆ ಎಂದು ಅವರು ಹೇಳಿದರು.

## ಸ್ವಾಮಿ ವಿವೇಕಾನಂದರ 123ನೇ ಪುಣ್ಯತಿಥಿ ನಮನ ಸಲ್ಲಿಸಿದ ಪ್ರಧಾನಿ ಮೋದಿ



**ನವದೆಹಲಿ, ಜು. 4–** ಪ್ರಧಾನಿ ನರೇಂದ್ರ ಮೋದಿ ಅವರು ಸನ್ಯಾಸಿ ಮತ್ತು ಆಧ್ಯಾತ್ಮಿಕ ನಾಯಕ ಸ್ವಾಮಿ ವಿವೇಕಾನಂದರಿಗೆ ಅವರ 123 ನೇ ಪುಣ್ಯತಿಥಿಯಂದು ಗೌರವ ಸಲ್ಲಿಸಿದರು.

ಸ್ವಾಮಿ ವಿವೇಕಾನಂದರ ಪುಣ್ಯ ತಿಥಿಯಂದು ನಾನು ಅವರಿಗೆ ನಮಿಸುತ್ತೇನೆ. ನಮ್ಮ ಸಮಾಜಕ್ಕಾಗಿ ಅವರ ಆಲೋಚನೆಗಳು ಮತ್ತು ದೃಷ್ಟಿಕೋನಗಳು ನಮ್ಮ ಮಾರ್ಗದರ್ಶಕ ಬೆಳಕಾಗಿ ಉಳಿದಿವೆ. ಅವರು ನಮ್ಮ ಇತಿಹಾಸ ಮತ್ತು ಸಾಂಸ್ಕೃತಿಕ ಪರಂಪರೆಯ ಬಗ್ಗೆ ಹೆಮ್ಮೆ ಮತ್ತು ವಿಶ್ವಾಸವನ್ನು ಹುಟ್ಟುಹಾಕಿದರು. ಅವರು ಸೇವೆ ಮತ್ತು ಕರುಣೆಯ ಹಾದಿಯಲ್ಲಿ ನಡೆಯುವುದರ ಬಗ್ಗೆಯೂ ಒತ್ತು ನೀಡಿದರು ಎಂದು ಮೋದಿ ಎಕ್ಸ್‌ನಲ್ಲಿ ಹೇಳಿದರು.

ವೇದಾಂತ ಮತ್ತು ಹಿಂದೂ ತತ್ವಶಾಸ್ತ್ರದ ಕುರಿತಾದ ಗ್ರಂಥವು ಅವರಿಗೆ ದೊಡ್ಡ ಅನುಯಾಯಿಗಳನ್ನು ಗಳಿಸಿದ ರಾಮಕೃಷ್ಣ ಮಿಷನ್‌ನ ಸಂಸ್ಥಾಪಕರು ಆಧುನಿಕ ಕೋಲ್ಕತ್ತಾದಲ್ಲಿ ಜನಿಸಿದರು ಮತ್ತು 39 ನೇ ವಯಸ್ಸಿನಲ್ಲಿ ನಿಧನರಾದರು.

ಅವರ ಆಧ್ಯಾತ್ಮಿಕ ಮತ್ತು ತಾತ್ವಿಕ ಸಾಧನೆಯು ಅನೇಕರಿಗೆ ಸ್ಫೂರ್ತಿಯ ಮೂಲವಾಗಿದೆ, ಮೋದಿ ಅವರನ್ನು ಅವರ ಮೇಲೆ ಪ್ರಮುಖ ಪ್ರಭಾವ ಬೀರಿದ ವ್ಯಕ್ತಿ ಎಂದು ಆಗಾಗ್ಗೆ ಉಲ್ಲೇಖಿಸುತ್ತಾರೆ.

# ರವಿಕುಮಾರ್ ಹೇಳಿಕೆ ಹೆಣ್ಣು ಕುಲಕ್ಕೆ ಅಪಮಾನ



**ಬೀದರ್, ಜು. 4–** ರಾಜ್ಯದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ವಿರುದ್ದ ಬಿಜೆಪಿಯ ವಿಧಾನಪರಿಷತ್ ಸದಸ್ಯ ರವಿಕುಮಾರ್ ಅವಹೇಳನಕಾರಿಯಾಗಿ ಮಾತನಾಡಿರುವುದು ಇಡೀ ಹೆಣ್ಣು ಕುಲಕ್ಕೆ ಮಾಡಿರುವ ಅವಮಾನ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು

ಬೀದರ್ ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ಮಾತ್ತೆತ್ತಿದ್ದರೆ ರಾಮಾಯಣ, ರಾಮ–ಸೀತೆ ಕುರಿತು ಮಾತನಾಡುತ್ತಾ ಮಹಿಳೆಯರನ್ನು ಗೌರವಿಸಬೇಕು ಎಂದು ಹೇಳುತ್ತಾರೆ. ಇನ್ನೊಂದು ಕಡೆ ಕೆಟ್ಟದ್ದಾಗಿ ಮಾತನಾಡುತ್ತಾರೆ. ಇದು ಬಿಜೆಪಿಯವರ ಸಂಸ್ಕೃತಿ. ಇವರಿಗೆ ಮಾನ ಮರ್ಯಾದೆ ಇಲ್ಲ ಎಂದು ಹರಿಹಾಯ್ದರು.

ಬಿಜೆಪಿಯ ಪರಿಷತ್ ಸದಸ್ಯ ರವಿಕುಮಾರ್ ಅವರಿಗೆ ಮಹಿಳೆಯರ ಬಗ್ಗೆ ಹಗುರವಾಗಿ ಮಾತನಾಡುವ ಕೆಟ್ಟ ಚಾಳಿ ಬಿದ್ದಿದೆ. ಮಹಿಳೆಯರನ್ನು ಅಪಮಾನಿಸಿ, ಅವಾಚ್ಯ ಶಬ್ದಗಳಿಂದ ನಿಂದಿಸಿ ಮಾನಸಿಕ ಹಿಂಸೆ ಕೊಡುವುದು ಬಿಜೆಪಿಯ ಚಾಳಿಯಾಗಿದೆ. ಈ ಹಿಂದೆ ಸಿ.ಟಿ. ರವಿ ಅವರು ಸದನದಲ್ಲಿ ನನ್ನನ್ನು ನಿಂದಿಸಿದರು. ಇಂತಹವರು ಜನಪ್ರತಿನಿಧಿಯಾಗಿ ಇರಕೂಡದು ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಭದ್ರವಾಗಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ಜನನಾಯಕ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಂಘಟನಾ ಚತುರರಿದ್ದಾರೆ. ಇಬ್ಬರೂ ಒಟ್ಟಿಗೆ ಸೇರಿಕೊಂಡು ನುಡಿದಂತೆ ನಡೆಯುತ್ತಿದ್ದಾರೆ. ಜನರಿಗೆ ಕೊಟ್ಟ ಭರವಸೆಗಳನ್ನು ಈಡೇರಿಸುತ್ತಿದ್ದಾರೆ ಎಂದು ಲಕ್ಷ್ಮಿ ಹೆಬಾಳ್ಕರ್ ಹೇಳಿದರು.

# ಕೈ ಅಧಿಕಾರಕ್ಕೆ ಬಂದರೆ ಆರ್‌ಎಸ್‌ಎಸ್ ಕಚೇರಿ ಮೇಲೆ ಐಟಿ–ಇಡಿ ದಾಳಿ



**ಕಲಬುರಗಿ, ಜು. 4–** ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮೂರು ಅಂಕಿಗಳ ಬಹುಮತ ದೊರೆತು ಸರಕಾರ ಅಧಿಕಾರಕ್ಕೆ ಬಂದರೆ ಮೊದಲು ಆರ್.ಎಸ್.ಎಸ್ ಕಚೇರಿ ಮೇಲೆ ಐ.ಟಿ ಮತ್ತು ಇ.ಡಿ ದಾಳಿ ನಡೆಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್ ಹಾಗೂ ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ನುಡಿದರು.

ನಗರದಲ್ಲಿ ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರ್.ಎಸ್.ಎಸ್.ನವರಿಗೆ ರೂ.300 ಕೋಟಿ, 400 ಕೋಟಿ ಎಲ್ಲಿಂದ ಬರುತ್ತಿದೆ ಎಂಬುದು ನನಗೆ ಗೊತ್ತಿದೆ. ಹಾಗಾಗಿ, ನಾವು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಮೊದಲು ಆರ್.ಎಸ್.ಎಸ್ ಕಚೇರಿ ಮೇಲೆ ಐ.ಟಿ ಮತ್ತು ಇ.ಡಿ ದಾಳಿ ನಡೆಸುವುದು ಖಚಿತ ಎಂದರು. ಬಿಜೆಪಿ ಮುಖಂಡರು ಆರ್.ಎಸ್.ಎಸ್ ಚೇಲಾಗಳು ಎಂದು ಕರೆಯು ವುದಕ್ಕೆ ನನಗೇನೂ ಹೆದರಿಕೆಯಿಲ್ಲ ಎಂದ ಅವರು, ನಾನು ಆರ್.ಎಸ್. ಎಸ್ ಮೇಲೆ ನಿಷೇಧ ಹೇರುತ್ತೇನೆ ಎಂದು ಎಲ್ಲಿಯೂ ಹೇಳಿಲ್ಲ. ಬದಲಿಗೆ, ಮೂರು ಸಲ ಆರ್.ಎಸ್.ಎಸ್ ನಿಷೇಧಗೊಂಡಿತ್ತು. ಆ ನಿಷೇಧ ಹಿಂಪಡೆದು ತಪ್ಪು ಮಾಡಿದ್ದೇವೆ ಎಂದಷ್ಟೇ ಹೇಳಿದ್ದೇನೆ' ಎಂದರು.

ಒಂದುವೇಳೆ, ನಾವು ಅಧಿಕಾರಕ್ಕೆ ಬಂದರೆ ಆರ್.ಎಸ್.ಎಸ್. ನಿಷೇಧ ಮಾಡಲಾಗುವುದು. ಅಲ್ಲಿಯವರೆಗೆ ಅವರಿಗೆ ಜೇಲಿಗೆ ಹೋಗೋಕೆ ಅಷ್ಟೊಂದು ಆತುರವಾದರೂ ಏಕೆ ಎಂದು ಪ್ರಶ್ನಿಸಿದರು. ಆರ್.ಎಸ್.ಎಸ್ ಮೇಲೆ ನಿಷೇಧ ಹೇರಲು ಬಿಜೆಪಿಯವರು 10 ಕಾರಣ ಕೇಳುತ್ತಾರೆ. ಆದರೆ, ಕಳೆದ 100 ವರ್ಷಗಳಲ್ಲಿ ಆರ್. ಎಸ್. ಎಸ್ ದೇಶದ ಸಬಲೀಕರಣಕ್ಕಾಗಿ ಮಾಡಿದ 10 ಒಳ್ಳೆಯ ಕೆಲಸಗಳ ಕುರಿತು ಮಾಹಿತಿ ನೀಡಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ಸವಾಲು ಹಾಕಿದರು.

ರಾಜ್ಯದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರ ಕುರಿತು ವಿಧಾನ ಪರಿಷತ್ ಸದಸ್ಯ ರವಿಕುಮಾರ್ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ. ರವಿಕುಮಾರ್ ಮೂಲತಃ ಬಿಜೆಪಿಯವರು ಅಲ್ಲ. ಅವರು ಆರ್.ಎಸ್.ಎಸ್ ಶಾಖೆಯಿಂದ ಬಂದವರು. ಅಲ್ಲಿ ಮನುಸ್ಮೃತಿ ಮನಸ್ಥಿತಿಯಿದೆ. ಹೀಗಾಗಿ, ಅವರ ಬಾಯಲ್ಲಿ ಹೀಗೆಲ್ಲಾ ಮಾತುಗಳು ಬರುತ್ತವೆ ಎಂದು ವ್ಯಾಖ್ಯಾನಿಸಿದರು.

ರವಿಕುಮಾರ್ ಅವರಿಗೆ ಮುಂಚೆಯಿಂದಲೂ ಬಾಯಿ ಚಪಲ ಜಾಸ್ತಿ. ಕಲಬುರಗಿಗೆ ಬಂದು ಜಿಲ್ಲಾಧಿಕಾರಿಗಳ ಬಗ್ಗೆ ಬಾಯಿಗೆ ಬಂದಂತೆ ಮಾತನಾಡಿದ್ದರು. ಇದನ್ನು ಖಂಡಿಸಿ ಕೋರ್ಟ್ ಛೀಮಾರಿ ಹಾಕಿದ್ದಲ್ಲದೆ, ಜಿಲ್ಲಾಧಿಕಾರಿಗಳ ಕ್ಷಮೆ ಕೇಳುವಂತೆ ತಾಕೀತು ಮಾಡಿತ್ತು. ಆದರೆ, ಈವರೆಗೆ ರವಿಕುಮಾರ್ ಕ್ಷಮೆ ಕೇಳಿಲ್ಲ. ಇದನ್ನು ನೋಡಿದರೆ ರವಿಕುಮಾರ್ ಅವರದ್ದು ಎಂತಹ ಕೊಳಕು ಮನಸ್ಸು ಎಂಬುದು ಅರ್ಥವಾಗುತ್ತದೆ ಎಂದರು.

ಹಾಗೆ ನೋಡಿದರೆ, ರವಿಕುಮಾರ್ ನಿಮ್ಹಾನ್ಸ್ ನಲ್ಲಿ ಇರಬೇಕಾದವರು ಎಂದ ಪ್ರಿಯಾಂಕ್, ಅಶ್ಲೀಲವಾಗಿ ಮಾತನಾಡಿರುವುದು ಸಾಬೀತಾದರೆ ನೇಣು ಹಾಕಿಕೊಳ್ಳುವುದಾಗಿ ರವಿಕುಮಾರ್ ಹೇಳಿದ್ದಾರೆ. ಹಾಗಾದರೆ ಅವರಿಗೆ ನೇಣು ಹಾಕಿಕೊಳ್ಳಲು ಹಗ್ಗ ಕೊಡಿ ಎಂದು ವಾಗ್ದಾಳಿ ನಡೆಸಿದರು. ರವಿಕುಮಾರ್ ಏನೆಲ್ಲಾ ಮಾತನಾಡಿದ್ದಾರೆ ಎಂಬುದಕ್ಕೆ ಎಲ್ಲ ಸಾಕ್ಷಿ ವಿಡಿಯೋದಲ್ಲಿದೆ. ಇದಕ್ಕಿಂತಲೂ ಹೆಚ್ಚಿನ ಸಾಕ್ಷಿ ಎಲ್ಲಿಂದ ತರಬೇಕು ಎಂದು ಪ್ರಶ್ನಿಸಿದರಲ್ಲದೆ, ಅವರಿಗೆ ನಾಚಿಕೆ ಆಗಬೇಕು. ಇಷ್ಟೆಲ್ಲಾ ಆದಾಗ್ಯೂ ಅವರು ತಮ್ಮ ಹೇಳಿಕೆ ಬಗ್ಗೆ ಸಮರ್ಥನೆ ಮಾಡಿಕೊಳ್ಳುತ್ತಾರೆ ಎಂದು ಅಚ್ಚರಿ ವ್ಯಕ್ತಪಡಿಸಿದರು.

ಆರ್.ಎಸ್.ಎಸ್ ದೇಶವಿರೋಧಿ ಸಂಘಟನೆ: ಆರ್.ಎಸ್.ಎಸ್ ಒಂದು ದೇಶ ವಿರೋಧಿ ಸಂಘಟನೆ ಎಂದು ಸ್ವತಃ ಅಂಬೇಡ್ಕರ್ ಅವರೇ ಹೇಳಿದ್ದರು. ಈಗಲೂ ಈ ಸಂಘಟನೆ ದೇಶದಲ್ಲಿ ಕೋಮು ಬೀಜ ಬಿತ್ತುವ ಕೆಲಸ ಮಾಡುತ್ತಿದೆ. 'ಒಂದು ಧರ್ಮ ಒಂದು ದೇಶ' ಎನ್ನುತ್ತಿದ್ದಾರೆ. ಹಾಗೇನಾದರೂ ಆಗುವುದಿದ್ದರೆ ಮನುಸ್ಮೃತಿ ಎಂಬುದು ಆರ್.ಎಸ್.ಎಸ್ ಮತ್ತು ಬಿಜೆಪಿ ಮುಖಂಡರು ಮನೆಗಳಲ್ಲಿ ಜಾರಿಗೆ ಆಗಲಿ ಎಂದರು.

# ಗುಣಮಟ್ಟದ ಶಿಕ್ಷಣ ಶಿಕ್ಷಣ ಗುರಿ: ಕೋನರಡ್ಡಿ



**ನವಲಗುಂದ,ಜು.4–** ತಾಲ್ಲೂಕಿನ ಸರ್ಕಾರಿ ಶಾಲೆಗಳ ಕಟ್ಟಡಕ್ಕಾಗಿ ವಿಶೇಷ ವಿನ್ಯಾಸದಿಂದ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡುವುದರೊಂದಿಗೆ ಮೂಲಭೂತ ಸೌಲಭ್ಯ ಒದಗಿಸುವ ಮೂಲಕ, ಶಿಕ್ಷಣ ತಜ್ಞರ ತಂಡದೊಂದಿಗೆ ಸಮಾಲೋಚಿಸಿ ಅವರ ಮಾರ್ಗದರ್ಶನದಲ್ಲಿ ಶೈಕ್ಷಣಿಕ ಕಾರ್ಯಾಗಾರ,ಕಮ್ಮಟ ಏರ್ಪಡಿಸಿ ಗುಣಮಟ್ಟದ ಶಿಕ್ಷಣ ನೀಡುವ ಗುರಿ ಹೊಂದಲಾಗಿದೆ ಎಂದು ಶಾಸಕ ಎನ್ ಎಚ್ ಕೋನರಡ್ಡಿ ತಿಳಿಸಿದರು.

ಅವರು ತಾಲ್ಲೂಕಿನ ಗುಡಿಸಾಗರ ಗ್ರಾಮದ ಶ್ರೀ ಚನ್ನಬಸಪ್ಪ ಹೊಳೆಯಣ್ಣವರ ಸರಕಾರಿ ಪ್ರೌಢಶಾಲೆಗೆ ಸ್ವಾಮಿ ವಿವೇಕಾನಂದ ಯೂತ್ ಮೂವಮೆಂಟ್ ಕ್ವಾಲಕಮ್ ಕಂಪನಿಯ ಸಹಕಾರದಿಂದ ನೂತನ ನಿರ್ಮಿಸಿರುವ ಕುಡಿಯುವ ನೀರು, ಕೈ ತೊಳೆಯುವ ತೊಟ್ಟಿ ಹಾಗೂ ಶೌಚಾಲಯಗಳ ಹಸ್ತಾಂತರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಸ್ವಾಮಿ ವಿವೇಕಾನಂದ ಯೂಥ ಮೂವಮೆಂಟರವರ ಕಾರ್ಯ ಶ್ಲಾಘನೀಯವಾದುದು. ಅತ್ಯಂತ ಗುಣಮಟ್ಟದಿಂದ ಕೂಡಿದ ಕಾಮಗಾರಿಗಳನ್ನು ನಿರ್ಮಾಣ ಮಾಡಿ ಶಾಲೆಗೆ ಹಸ್ತಾಂತರ ಮಾಡಿದ್ದಾರೆ. ಇಂತಹ ಘಟಕಗಳನ್ನು ನವಲಗುಂದ ತಾಲ್ಲೂಕಿನ ವಿವಿಧ ಶಾಲೆಗಳಲ್ಲಿ ನಿರ್ಮಾಣ ಮಾಡುವಂತೆ ಕೋನರಡ್ಡಿ ತಿಳಿಸಿದರು.

ಎ ಬಿ ಕೊಪ್ಪದ ಮಾತನಾಡಿ ಗ್ರಾಮೀಣ ಮಕ್ಕಳು ಅತ್ಯಂತ ಪ್ರತಿಭಾವಂತರಾಗಿದ್ದು.ಅವರಿಗೆ ಉತ್ತಮ ಮಾರ್ಗದರ್ಶನ ದೊರೆತಲ್ಲಿ ಉತ್ತಮ ಫಲಿತಾಂಶ ಪಡೆಯುವಲ್ಲಿ ಸಂಶಯವಿಲ್ಲ.ವಿಷಯಗಳ ಮೂಲಪರಿಕಲ್ಪನೆಗಳನ್ನು ಕೌಶಲ್ಯಪೂವ9ಕವಾಗಿ ಮಕ್ಕಳಲ್ಲಿ ಮೂಡಿಸುವ ಕಾರ್ಯಮಾಡುವದರಿಂದ ಶಾಶ್ವತ ಕಲಿಕೆ ಸಾಧ್ಯ. ಮೌಲ್ಯ ಶಿಕ್ಷಣದ ಬೀಜ ಬಿತ್ತುವದರಿಂದ ಸುಂದರ,ಸದೃಢ ಸಮಾಜ ನಿರ್ಮಾಣವಾಗುವದು ಎಂದರು. ಇದೆ ವೇಳೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ನಂತರ ಬಿಸಿ ಊಟದ ಗುಣಮಟ್ಟ ತಿಳಿಯಲು ಶಾಸಕರು ವಿದ್ಯಾರ್ಥಿಗಳೊಂದಿಗೆ ಊಟ ಸವಿದರು.

ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾರಾದ ಇಂದುಮತಿ ವಿಷ್ಣುನಾಯ್ಕ, ಸ್ವಾಮಿ ವಿವೇಕಾನಂದ ಯೂತ್ ಮೂವಮೆಂಟ್ ಯೋಜನಾ ನಿರ್ದೇಶಕ ಜಯಕುಮಾರ ಕೆ, ಗ್ರಾ ಪಂ ಅಧ್ಯಕ್ಷೆ ರತ್ನಮ್ಮ ಗುಡಿಸಲಮನಿ, ಉಪಾಧ್ಯಕ್ಷೆ ನಜೀರಾಬೇಗಂ ದಿವಾನಸಾಬನವರ, ಎಸ್ ಸಿ ಹೊಳೆಯಣ್ಣವರ, ಬಿ ಟಿ ಕುಲಕರ್ಣಿ, ಎಸಡಿಎಂಸಿ ಪದಾಧಿಕಾರಿಗಳಾದ ಚಿದಾನಂದ ಮುತ್ತಣ್ಣವರ, ಖಾಜಾಸಾಹೇಬ ದಿವಾನಸಾಬನವರ, ಗುರುನಾಥ ಉಳ್ಳಾಗಡ್ಡಿ, ಭೀಮಣ್ಣ ಪಟ್ಟೇದ, ಎ ಡಿ ಕುಲಕರ್ಣಿ ಎಲ್.ವಾಯ್. ರಾಯಪ್ಪನವರ ಮಂಜುಕುಮಾರಿ ರಜಪೂತ, ಶಿವಾನಂದ ಜನ್ನರ, ನಾಗಲಿಂಗಪ್ಪ ಹೊಳೆಯಣ್ಣವರ, ಎಂ.ಎಸ್.ಹಡಲಗಿ ಸೇರಿದಂತೆ ಗ್ರಾ ಪಂ ಸದಸ್ಯರು, ಶಾಲಾ ಆಡಳಿತ ಮಂಡಳಿ ಸದಸ್ಯರ ಹಾಗೂ ಶಿಕ್ಷಕರು,ಮುದ್ದು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬಿಜೆಪಿಗೆ ಮಹಿಳಾ ಸಾರಥ್ಯ

**ನವದೆಹಲಿ,ಜು.4–**ಇದುವರೆಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ಸ್ಥಾನಕ್ಕೆ ದಿಗ್ಗಜ ನಾಯಕರುಗಳ ಹೆಸರುಗಳು ಕೇಳಿ ಬರುತ್ತಿರುವಾಗಲೇ ರಾಷ್ಟ್ರೀಯ ಅಧ್ಯಕ್ಷನ್ನಾಗಿ ಮಹಿಳೆಯೊಬ್ಬರನ್ನು ನೇಮಿಸಬೇಕೆಂಬ ಒತ್ತಾಯಗಳು ಬಿಜೆಪಿಯಲ್ಲಿ ಪ್ರಬಲವಾಗಿವೆ.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿ ಇದುವರೆಗೂ ಯಾವೊಬ್ಬ ಮಹಿಳೆಯು ಕೆಲಸ ಮಾಡಿಲ್ಲ. ಪ್ರಧಾನಿ ನರೇಂದ್ರಮೋದಿ ಅವರ ನಾರಿಶಕ್ತಿ ಚಿಂತನೆಗೆ ಬಲ ತುಂಬುವ ನಿಟ್ಟಿನಲ್ಲಿ ರಾಷ್ಟ್ರೀಯ ಮಹಿಳಾ ಅಧ್ಯಕ್ಷ ಸ್ಥಾನಕ್ಕೆ ಪ್ರಥಮ ಬಾರಿಗೆ ಮಹಿಳೆಯೊಬ್ಬರನ್ನು ಪರಿಗಣಿಸಬೇಕು ಎಂಬ ಒತ್ತಡಗಳು ಹೆಚ್ಚಿವೆ.ಈ ನಡುವೆ ಆರ್‌ಎಸ್‌ಎಸ್ ಸಹ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಮಹಿಳೆಯರನ್ನು ಆಯ್ಕೆ ಮಾಡಲು ಸಮ್ಮತಿಸಿದೆ ಎಂದು ತಿಳಿದು ಬಂದಿದೆ.

ಮಹಿಳೆಯೊಬ್ಬರನ್ನು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ನೇಮಕ ಮಾಡಿದರೆ ಮಹಿಳಾ ಮತದಾರರ ಒಲವು ಗಳಿಸುವ ಜೊತೆಗೆ ಬಿಜೆಪಿಯ ಮಹಿಳಾ ಅಭಿವೃದ್ಧಿಯ ಬದ್ಧತೆಯನ್ನು ಪ್ರದರ್ಶಿಸಿದಂತಾಗುತ್ತದೆ. ಬಿಜೆಪಿ ಮಹಿಳೆಯರ ಪರ ಇದೆ ಎಂಬ ಸಂದೇಶವನ್ನು ನೀಡಿದಂತಾಗುತ್ತದೆ. ಹಾಗಾಗಿ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಮಹಿಳೆಯರನ್ನು ನೇಮಿಸಿ ಎಂಬ ಕೂಗು ಬಿಜೆಪಿಯಲ್ಲಿ ಪ್ರಬಲವಾಗಿ ಕೇಳಿ ಬಂದಿದೆ.

ದಕ್ಷಿಣ ಭಾರತಕ್ಕೆ ಸೇರಿದ ಬಿಜೆಪಿಯ ನಾಯಕಿಯೊಬ್ಬರನ್ನು ಪಕ್ಷದ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಎಂಬ ಒತ್ತಾಯವೂ ಇದ್ದು, ತಮಿಳುನಾಡು ಮೂಲದ ನಾಯಕಿಯೊಬ್ಬರನ್ನು ಪಕ್ಷದ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ನೇಮಕ ಮಾಡಿದರೆ ತಮಿಳುನಾಡಿನಲ್ಲೂ ಪಕ್ಷವನ್ನು ಬಲಪಡಿಸಬಹುದೆಂಬ ಲೆಕ್ಕಾಚಾರವೂ ಬಿಜೆಪಿಯಲ್ಲಿ ನಡೆದಿದೆ. ಅದರಂತೆ ಈ ಬಾರಿಯ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ಸ್ಥಾನಕ್ಕೆ ಬಿಜೆಪಿಯ ನಾಯಕರುಗಳಾದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್, ಡಿ. ಪುರಂದರೇಶ್ವರಿ,

ವನತಿ ಶ್ರೀನಿವಾಸನ್ ಸೇರಿದಂತೆ ಹಲವು ಹೆಸರುಗಳು ಕೇಳಿ ಬರುತ್ತಿವೆ. ನಿರ್ಮಲಾಸೀತಾರಾಮನ್ ಅವರು ತಮಿಳುನಾಡು ಮೂಲದವರಾಗಿದ್ದು, ವಿತ್ತ ಸಚಿವೆಯಾಗಿ ಕಳೆದ 6 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಪುರಂದರೇಶ್ವರಿ ಅವರು ಆಂಧ್ರಮೂಲದವರಾಗಿದ್ದು, ಆಂಧ್ರ ಪ್ರದೇಶ ಬಿಜೆಪಿ ಅಧ್ಯಕ್ಷರಾಗಿಯೂ ಕೆಲಸ ಮಾಡಿದ್ದರು. ಬಿಜೆಪಿ ರಾಷ್ಟ್ರೀಯ ಮಹಿಳಾಮೋರ್ಚಾದ ಅಧ್ಯಕ್ಷರಾಗಿರುವ ವನತಿ ಶ್ರೀನಿವಾಸನ್ ಸಹ ತಮಿಳುನಾಡು ಮೂಲದವರಾಗಿದ್ದು, ಕಳೆದ ಚುನಾವಣೆಯಲ್ಲಿ ನಟ ಕಮಲ್‌ಹಾಸನ್ ಅವರನ್ನು ಸೋಲಿಸಿ ಲೋಕಸಭೆಗೆ



ಆಯ್ಕೆಯಾಗಿದ್ದರು. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ಹುದ್ದೆಯನ್ನು ಯಾರು ಅಲಂಕರಿಸುತ್ತಾರೆ ಎನ್ನುವುದು ಇದುವರೆಗೂ ಖಚಿತವಾಗಿಲ್ಲ. ಆದರೆ, ಬಿಜೆಪಿ ತನ್ನ ಮೊದಲ ಬಾರಿಗೆ ಮಹಿಳೆಯರನ್ನು ಅಧ್ಯಕ್ಷರ ಆಯ್ಕೆಯನ್ನು ಮಾಡುವ ಸಾಧ್ಯತೆಗಳಿವೆ. ಭಾರತೀಯ ಜನತಾ ಪಕ್ಷದ ಆರು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶ ಘಟಕಗಳಿಗೆ ಅಧ್ಯಕ್ಷರನ್ನು ನೇಮಕ ಮಾಡಿದ ನಂತರ ಇದೀಗ ಬಿಜೆಪಿ ತನ್ನ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆಯತ್ತ ಗಮನ ಕೇಂದ್ರೀಕರಿಸುತ್ತಿದೆ.

ಜೆಪಿ ನಡ್ಡಾ ಅವರು 2020 ರಿಂದ ಪಕ್ಷದ ರಾಷ್ಟ್ರೀಯ ಅಧ್ಯಕ್ಷರ ಹುದ್ದೆಯಲ್ಲಿ ಮುಂದುವರೆದಿದ್ದಾರೆ. 2023ಕ್ಕೆ ನಡ್ಡಾ ಅವರ ಅಧ್ಯಕ್ಷ ಅವಧಿ ಪೂರ್ಣಗೊಂಡಿದ್ದರೂ ಸಹ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ನಡ್ಡಾ ಅವರ ಅಧ್ಯಕ್ಷ ಅವಧಿಯನ್ನು 2024ರ ವರೆಗೆ ಮುಂದುವರೆಸಲಾಗಿತ್ತು.

ಆದರೆ,ಈ ಬಾರಿ ವಿವಿಧ ರಾಜ್ಯಗಳ ಅಧ್ಯಕ್ಷರ ನೇಮಕಾತಿ ನಂತರ ರಾಷ್ಟ್ರೀಯ ಅಧ್ಯಕ್ಷರ ನೇಮಕಾತಿ ನಡೆಯಲಿದ್ದು, ಇನ್ನೊಂದು ವಾರದೊಳಗೆ ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆ ಅಂತಿಮಗೊಳ್ಳಲಿದೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಮಹಿಳೆಯೊಬ್ಬರನ್ನು ಆಯ್ಕೆ ಮಾಡಲಾಗುತ್ತದೆಯೇ. ಈ ಬಾರಿಯಾದರೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಸ್ಥಾನ ಮಹಿಳೆಯರಿಗೆ ಸಿಗಲಿದೆಯೇ ಎಂಬುದು ಕುತೂಹಲ ಮೂಡಿಸಿದೆ.

ಯುವ ಮಾರ್ಗ

ಶನಿವಾರ : 05–07–2025

## ಸೈಬರ್ ಭದ್ರತೆ ಅತ್ಯಗತ್ಯ: ಪ್ರೊ.ಬಟ್ಟು ಸತ್ಯನಾರಾಯಣ



**ಕಲಬುರಗಿ,ಜು.4–**ಸೈಬರ್ ಭದ್ರತೆ ಅತ್ಯಗತ್ಯ, ಮತ್ತು ಬೌದ್ಧಿಕ ಆಸ್ತಿಯ ಸುರಕ್ಷತೆಗಾಗಿ ಪ್ರತಿಯೊಬ್ಬರೂ ಅದನ್ನು ಅರ್ಥಮಾಡಿಕೊಳ್ಳಬೇಕು ಮತ್ತು ಅನುಸರಿಸಬೇಕು. ಎಂದು ಸಿಯುಕೆಯ ಉಪಕುಲಪತಿಗಳಾದ ಪ್ರೊ.ಬಟ್ಟು ಸತ್ಯನಾರಾಯಣ ಹೇಳಿದರು.

ಸೈಬರ್ ಭದ್ರತಾ ತರಬೇತಿ ಕಾರ್ಯಕ್ರಮದ ಕುರಿತು ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು,ಈ ತರಬೇತಿ ಕಾರ್ಯಕ್ರಮವು ಮಾಲ್ವೇರ್, ರಾನ್ಸಮ್ವೇರ್, ಫಿಶಿಂಗ್ ದಾಳಿಗಳು ಮತ್ತು ಡಿಜಿಟಲ್ ಸ್ವತ್ತುಗಳನ್ನುಗುರಿಯಾಗಿಸುವ ಇತರ ದುರುದ್ದೇಶಪೂರಿತ ಚಟುವಟಿಕೆಗಳ ಬಗ್ಗೆ ಜಾಗೃತಿ ಮೂಡಿಸುತ್ತದೆ ಎಂದು ಹೇಳಿದರು.ನಮಗೆ ಸೈಬರ್ ಭದ್ರತೆ ಅಗತ್ಯವಿದೆ ಏಕೆಂದರೆ ಅದು ನಿಖರವಾದ ಡೇಟಾವನ್ನು ಖಚಿತಪಡಿಸುತ್ತದೆ ಮತ್ತು ಯಾವುದೇ ವ್ಯಕ್ತಿಯ ಸೂಕ್ಷ್ಮ ಮಾಹಿತಿಯನ್ನು ತಿರುಚುವುದನ್ನು ತಪ್ಪಿಸುತ್ತದೆ ಎಂದು ರಿಜಿಸ್ಟ್ರಾರ್ ಪ್ರೊ. ಆರ್ ಆರ್ ಬಿರಾದಾರ್ ಹೇಳಿದರು.

ಓಖುಖಿ ಪ್ರತಿಷ್ಠಾನದ ಸಂಪನ್ಮೂಲ ವ್ಯಕ್ತಿ ಮತ್ತು ಪ್ರಾದೇಶಿಕ ವ್ಯವಸ್ಥಾಪಕ ನೀಲೇಶ್ ಖನ್ನಾ, "ಡಿಜಿಟಲ್ ಸುರಕ್ಷತೆ, ಸೈಬರ್ ನೈರ್ಮಲ್ಯ ಮತ್ತು ಸುರಕ್ಷಿತ ಅಭ್ಯಾಸಗಳು ಇಂದಿನ ಅಗತ್ಯ. ಸೈಬರ್ ಭದ್ರತೆಯ ಸಹಾಯದಿಂದ ವೈಯಕ್ತಿಕ ಡೇಟಾವನ್ನು ರಕ್ಷಿಸಬಹುದು. ಸಾಮಾಜಿಕ ಎಂಜಿನಿಯರಿಂಗ್ ಎಂದರೆ ಕೇಂದ್ರೀಕೃತ ಯೋಜನೆಯ ಬಳಕೆ ಮತ್ತು ಇದು ಸಾಮಾಜಿಕ ಬದಲಾವಣೆಯನ್ನು ನಿರ್ವಹಿಸಲು ಮತ್ತು ಸಮಾಜದ ಭವಿಷ್ಯದ ಅಭಿವೃದ್ಧಿ ಮತ್ತು ನಡವಳಿಕೆಯನ್ನು ನಿಯಂತ್ರಿಸಲು ಪ್ರಯತ್ನಿಸುತ್ತದೆ. &ಡಣಾಂಣ;ಮಾಹಿತಿ ಸುರಕ್ಷತೆ, ಅಪಾಯ ನಿರ್ವಹಣಾ ಆಡಳಿತ, ಸುರಕ್ಷಿತ ಸಂರಚನೆ, ನೆಟ್ವರ್ಕ್ ಭದ್ರತೆ, ಬಳಕೆದಾರರ ಸವಲತ್ತುಗಳನ್ನು ನಿರ್ವಹಿಸುವುದು, ಬಳಕೆದಾರ ಶಿಕ್ಷಣ ಮತ್ತು ಜಾಗೃತಿಯ ಸಂದರ್ಭದಲ್ಲಿ, ಮಾಲ್ವೇರ್ ತಡೆಗಟ್ಟುವಿಕೆ, ಮೇಲ್ವಿಚಾರಣೆ ಮತ್ತು ಇತರ ಕ್ರಮಗಳು ಸೈಬರ್ ಭದ್ರತೆಗೆ ಪರಿಣಾಮಕಾರಿ ವಿಧಾನಕ್ಕೆ ನಮಗೆ ಸಹಾಯ ಮಾಡುತ್ತವೆ."ಎಂದು ಅವರು ಹೇಳಿದರು.

ವಿಶ್ವೇಶ್ವರಯ್ಯ ಪಿಎಚ್ಡಿ ಯೋಜನೆಯ ಕಾರ್ಯಕ್ರಮ ಸಂಚಾಲಕರು ಮತ್ತು ನೋಡಲ್ ಅಧಿಕಾರಿ ಪ್ರೊ. ಆರ್. ಎಸ್. ಹೆಗಾಡಿ ಸ್ವಾಗತಿಸಿ, "ಈ ಕಾರ್ಯಕ್ರಮಗಳು ಉದ್ಯೋಗಿಗಳಲ್ಲಿ ಸೈಬರ್ ಬೆದರಿಕೆಗಳ ಸಿಯುಕೆ ವಿಶ್ವವಿದ್ಯಾಲಯ ಕೈಗಾರಿಕಾ ಕೇಂದ್ರದ ನಿರ್ದೇಶಕ ಪ್ರೊ. ಎ.ಎನ್. ವಿಜಯ್ಕುಮಾರ್ ಅವರು ಒಪ್ಪಂದದ ಮಹತ್ವದ ಬಗ್ಗೆ ವಿವರಿಸಿದರು, ಐಕ್ಯೂಎಸಿ ನಿರ್ದೇಶಕ ಡಾ. ಅಮರೇಂದ್ರ ಮತ್ಸ ಅವರು ಧನ್ಯವಾದ ಅರ್ಪಿಸಿದರು. ಕಾರ್ಯಕ್ರಮದಲ್ಲಿ ಎಲ್ಲಾ ಡೀನ್ಗಳು, ಮುಖ್ಯಸ್ಥರು, ಸಂಯೋಜಕರು, ಅಧ್ಯಾಪಕರು ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.ಬಗ್ಗೆ ಅರಿವು ಮೂಡಿಸುವ ಜ್ಞಾನವನ್ನು ಹೆಚ್ಚಿಸುತ್ತವೆ." ಎಂದು ಹೇಳಿದರು.

## ನನ್ನ ಮತ ಮಾರಾಟಕ್ಕಿಲ್ಲ ಮತದಾರ ಜಾಗೃತಿ ಆಂದೋಲನ




**ಕಲಬುರಗಿ,ಜು.4–** ನಗರದ ಎಂ ಜಿ ರಸ್ತೆಯಲ್ಲಿರುವ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದಲ್ಲಿ ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿಯಿಂದ ನನ್ನ ಮತ ಮಾರಾಟಕ್ಕಿಲ್ಲಮತದಾರ ಜಾಗೃತಿ ಆಂದೋಲನ ಕಾರ್ಯಕ್ರಮ ಜರುಗಿತು.ಕಾರ್ಯಕ್ರಮ ಉದ್ಘಾಟಿಸಿದ ಡಾ. ಬಿಆರ್ ಅಂಬೇಡ್ಕರ್ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ವಿಜಯಕುಮಾರ .ಡಿ ಅವರು ಮಾತನಾಡಿ, ಚುನಾವಣೆಗಳಲ್ಲಿ ಹಣಬಲ ಹೆಚ್ಚುತ್ತಾ ಹೋದಂತೆ ದೇಶದಲ್ಲಿ ಭ್ರಷ್ಟಾಚಾರ ಹೆಚ್ಚಳವಾಗಲಿಕ್ಕೆ ಕಾರಣವಾಗುತ್ತದೆ.ಚುನಾವಣೆಯಲ್ಲಿ ಹಣ ಹಂಚುವುದನ್ನು ತಡೆಯುವುದು ಪ್ರತಿಯೊಬ್ಬ ಪ್ರಜೆಯ ಕರ್ತವ್ಯವಾಗಿದೆ. ಪ್ರತಿಯೊಬ್ಬ ಮತದಾರರು ತಮ್ಮ ಮತದ ಮೌಲ್ಯವನ್ನು ಅರಿತುಕೊಂಡು ಚುನಾವಣೆಗಳಲ್ಲಿ ಸಮರ್ಥ ವ್ಯಕ್ತಿಗಳಿಗೆ ಮತ ಚಲಾಯಿಸಬೇಕು ಎಂದು ತಿಳಿಸಿದರು.ಪ್ರತಿಯೊಬ್ಬ ಮತದಾರರು ತಮ್ಮ ಮತದ ಮೌಲ್ಯವನ್ನು ಅರಿತುಕೊಳ್ಳಬೇಕು.ಯಾವುದೇ ಆಸೆ– ಆಮಿಷಗಳಿಗೆ ಬಲಿಯಾಗದೆ ಮತದಾರರು ಪ್ರಾಮಾಣಿಕ ವ್ಯಕ್ತಿಗಳನ್ನು ಚುನಾವಣೆಯಲ್ಲಿ ಆಯ್ಕೆ ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಬಲಗೊಳಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿಯ ಸಂಸ್ಥಾಪಕ ರಮೇಶ ಆರ್ ದುತ್ತರಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪ್ರಾಂಶುಪಾಲ ಶಿವರಾಜ ಎಂ ಶೀಲವಂತ ಅಧ್ಯಕ್ಷತೆ ವಹಿಸಿದ್ದರು. ಉಪನ್ಯಾಸಕ ಭೀಮಾಶಂಕರ ಜಮಾದಾರ ನಿರೂಪಿಸಿದರು.ವಿದ್ಯಾರ್ಥಿನಿ ಪ್ರೇಮಾ ರಾಜಶೇಖರ ಪ್ರಾರ್ಥನೆ ಗೀತೆ ಹಾಡಿದರು.ಅಮೂಲ್ಯ ರಾಜಶೇಖರ ಸ್ವಾಗತಿಸಿದರು. ಉಪನ್ಯಾಸಕನಿವಾಸ ಶೆಟ್ಟಿ ವಂದನಾರ್ಪಣೆ ಮಾಡಿದರು. ಉಪನ್ಯಾಸಕ ಪಂಡಿತ ಮಧುಗುಣಕಿ ಪ್ರತಿಜ್ಞಾವಿಧಿ ಬೋಧಿಸಿದರು.

## ಕರವೇ ಅಧ್ಯಕ್ಷ ಕೆ.ರಾಘವೇಂದ್ರ ಅವರ ಮೇಲೆ ದಾಖಲಾದ ಕೇಸ್ ಹಿಂಪಡೆಯುವಂತೆ ಆಗ್ರಹ



**ಯುವ ಮಾರ್ಗ ಸುದ್ದಿ**

**ಸಿರವಾರ, ಜು.4–**ಕರ್ನಾಟಕ ರಕ್ಷಣ ವೇದಿಕೆ (ಪ್ರವೀಣ ಶೆಟ್ಟಿ ಬಣ) ತಾಲೂಕ ಅಧ್ಯಕ್ಷರಾದ ಕೆ. ರಾಘವೇಂದ್ರ ಖಾಜನಗೌಡ ಇವರ ಮೇಲೆ ದಾಖಲಾದ ಕೇಸ್ ಹಿಂಪಡೆಯುವಂತೆ ವಿವಿಧ ಸಂಘಟನೆಗಳ ಮುಖಂಡರು ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ಸಿರವಾರ ಪಟ್ಟಣ ಪಂಚಾಯತಿಯ ವ್ಯಾಪ್ತಿಯ ಸರ್ವೇ ನಂ. 95/+/ ವಿಸ್ತೀರ್ಣ 05 ಎಕರೆ 38 ಗುಂಟೆ ಪೈಕಿ 04ಎಕರೆ ಜಮೀನು ಕುಡಿಯುವ ನೀರಿನ ಕರೆ ನಿರ್ಮಾಣಕ್ಕಾಗಿ ಮೀಸಲಿಟ್ಟ ಜಾಗದಲ್ಲಿರುವ ಮೊರಂನ್ನು ಆಕ್ರಮವಾಗಿ ಖಾಸಗಿ ಕಂಪನಿಯಾದ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗೆ ಮೊರಂನ್ನು ಜಿಲ್ಲಾಧಿಕಾರಿಗಳು ಕುಡಿಯುವ ನೀರಿನ ಕೆರೆಯನ್ನು ಮಾಡಿಕೊಡಬೇಕೆಂದು ಒಪ್ಪಂದ ಮಾಡಿಕೊಂಡಿದ್ದು, ಈ ಕುರಿತು ಪಟ್ಟಣ ಪಂಚಾಯತಿ ಅಧ್ಯಕ್ಷರಿಗೂ, ಸರ್ವ ಸದಸ್ಯರಿಗೂ ಹಾಗೂ ಪಟ್ಟಣದ ಮುತಖಂಡರಿಗೂ ಯಾವುದೇ ಮಾಹಿತಿ ಇಲ್ಲದೇ ಇರುವುದರಿಂದ ಸರಕಾರದ ಜಮೀನಿನಲ್ಲಿರುವ ಮೊರಂನ್ನು ಖಾಸಗಿ ಕಂಪನಿಗಳು ತಗೆದು ಕೊಂಡು ಹೋಗುವುದನ್ನು ಪ್ರಶ್ನಿಸಿದ್ದಕ್ಕೆ ಕರ್ನಾಟಕ ರಕ್ಷಣ ವೇದಿಕೆ (ಪ್ರವೀಣ ಶೆಟ್ಟಿ ಬಣ)ದ ತಾಲೂಕ ಅಧ್ಯಕ್ಷರಾದ ಕೆ. ರಾಘವೇಂದ್ರ ಖಾಜನಗೌಡ ಇವರ ವಿರುದ್ಧ ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿ ತಿಮ್ಮಪ್ಪ ಜಗಲಿ ಇವರ ಮುಖಾಂತರ ಸಿರವಾರ ಪೋಲಿಸ್ ಠಾಣೆಯಲ್ಲಿ ದೂರು ದಾಖಲು ಮಾಡಿದ್ದಾರೆ, ಸರಕಾರಕ್ಕೆ ನಷ್ಟವಾಗುವುದನ್ನು ಸಂಘ–ಸಂಸ್ಥೆಗಳು ಪ್ರಶ್ನೆ ಮಾಡಲು ಹೋದರೆ ಅಧಿಕಾರಿಗಳು ಸಂಘಟನೆಗಾರರಿಗೆ ಉತ್ತರ ನೀಡದೇ ದೂರು ದಾಖಲಿಸಿರುವುದನ್ನು ಮುಖಂಡರು ಖಂಡಿಸಿದರು.

ಸರಕಾರದ ಆಸ್ತಿ ನಷ್ಟವನ್ನು ಪ್ರಶ್ನಿಸಿದ ಸಂಘಟನೆಗಾರರ ಮೇಲೆ ದಾಖಲಿಸಿದ ದೂರನ್ನು 3–4 ದಿನಗಳ ಒಳಗೆ ಹಿಂಪಡೆಯಬೇಕು ಒಂದು ವೇಳೆ ದೂರನ್ನು ಹಿಂಪಡೆಯದಿದ್ದರೇ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಮುಂದೆ ಉಗ್ರವಾಗಿ ಹೋರಾಟ ಮಾಡಲಾಗುವುದು ಎಂದು ಹೆಚ್ಚರಿಸಿದರು.

ಈ ಸಂದರ್ಭದಲ್ಲಿ ವೆಂಕಟೇಶ್ ಶಂಕ್ರಿ, ಯಲ್ಲಪ್ಪ ದೊರೆ, ಮೆಷಕ್ ದೊಡ್ಮನಿ, ಹುಲುಗಪ್ಪ ಮಡಿವಾಳ, ಹೆಚ್.ಕೆ.ಕರಿಯಪ್ಪ, ಮುದುಕಪ್ಪ ಚಾಗಭಾವಿ, ರವಿಕುಮಾರ್ ಮಲ್ಲಟ, ನಾಗೇಶ್ ನಾಯಕ ನವಲಕಲ್, ಹನುಮೇಶ ಶಾಖಾಪೂರು, ಭೀಮರಾಜ ಅಂಬಿಗ ರಮೇಶ್ ದೊರೆ ಮೌನೇಶ ಪಾಟೀಲ್, ಹನುಮಂತ ಪಿಡಬ್ಲ್ಯೂಡಿ, ವೀರೇಶ್ ನಾಯಕ ಗಡ್ಲ, ಹನುಮಂತ ಭೋವಿ, ರಾಮಸ್ವಾಮಿ ಚಲವಾದಿ, ಚನ್ನಬಸವ ಮರಾಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಪ್ರಯತ್ನ ವಿಫಲವಾದರೂ ಪ್ರಾರ್ಥನೆ ವಿಫಲವಾಗಲ್ಲ: ಡಿಕೆಶಿ

**ಬೆಂಗಳೂರು, ಜು. 4–** ಪ್ರಯತ್ನ ವಿಫಲವಾದರೂ ಪ್ರಾರ್ಥನೆ ಫಲ ಕೊಡುತ್ತದೆ ಎಂದಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಾಯಿ ಚಾಮುಂಡೇಶ್ವರಿ ಬಳಿ ನನಗೆ ಏನು ಬೇಕೋ ಅದನ್ನು ಬೇಡಿಕೊಂಡಿದ್ದೇನೆ ಎಂದರು.

ಆಷಾಡದ ಎರಡನೇ ಶುಕ್ರವಾರವಾದ ಇಂದು ಮೈಸೂರಿನ ಚಾಮುಂಡಿಬೆಟ್ಟಕ್ಕೆ ಕುಟುಂಬ ಸಮೇತ ಭೇಟಿ ನೀಡಿ ಚಾಮುಂಡೇಶ್ವರಿದೇವಿಯ ದರ್ಶನ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಯಿ ಬಳಿ ನನಗೆ ಏನು ಬೇಕೋ ಅದನ್ನು ಬೇಡಿಕೊಂಡಿದ್ದೇನೆ ಎಂದರು.

ಪ್ರಯತ್ನಕ್ಕಿಂತ ಪ್ರಾರ್ಥನೆ ಫಲ ಕೊಡುತ್ತದೆ ಎಂಬುದು ನಮ್ಮ ನಂಬಿಕೆ. ಕುಟುಂಬಸ್ಥರೊಂದಿಗೆ ಬಂದು ತಾಯಿಯ ದರ್ಶನ ಪಡೆದಿದ್ದೇನೆ. ರಾಜ್ಯಕ್ಕೆ ಒಳ್ಳೆಯದಾಗಲಿ ಎಂದು ದೇವಿ ಬಳಿ ಪ್ರಾರ್ಥನೆ ಮಾಡಿದ್ದೇನೆ ಎಂದರು . ಇಲ್ಲಿ ರಾಜಕೀಯ ವಿಚಾರ ಮಾತನಾಡುವುದಕ್ಕೆ ನಾನು ಬಯಸಲ್ಲ. ಎಐಸಿಸಿ ಅಧ್ಯಕ್ಷ



ಮಲ್ಲಿಕಾರ್ಜುನಖರ್ಗೆ ಅವರು ನನಗೆ ಬುದ್ದಿ ಮಾತು ಹೇಳಿದ್ದಾರೆ. ನಾವೆಲ್ಲರೂ ಒಟ್ಟಾಗಿ ಸೇರಿಕೊಂಡು ರಾಜ್ಯದ ಅಭಿವೃದ್ಧಿ ಕೆಲಸ ಮಾಡುತ್ತೇವೆ ಎಂದಷ್ಟೇ ಹೇಳಿದರು.

## ಬೀದರ್‌ನಲ್ಲಿ ಬೃಹತ್ ಉದ್ಯಮ ಸ್ಥಾಪಿಸಲು ಸೂರ್ಯಕಾಂತ ನಾಗಮಾರಪಳ್ಳಿ ಮನವಿ

**ಬೀದರ್,ಜು.4–** ಹಿಂದುಳಿದ ಬೀದರ್ ನಲ್ಲಿ ಬೃಹತ್ ಉದ್ಯಮ ಸ್ಥಾಪಿಸಿ ದುಡಿಯುವ ಕೈಗಳಿಗೆ ಕೆಲಸ ಕೊಡುವಂತೆ ಜೆಡಿಎಸ್ ಮುಖಂಡ ಹಾಗೂ ಗುರುಪಾದಪ್ಪ ನಾಗಮಾರಪಳ್ಳಿ ಫೌಂಡೇಷನ್ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ಅವರು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಮನವಿ ಮಾಡಿದ್ದಾರೆ.

ಮಹಾರಾಷ್ಟ್ರ ಹಾಗೂ ತೆಲಂಗಾಣ ರಾಜ್ಯಗಳ ಗಡಿಯಲ್ಲಿ ಇರುವ ಬೀದರ್ ಜಿಲ್ಲೆಯು ಕೈಗಾರಿಕೋದ್ಯಮದ ಬೆಳವಣಿಗೆಯಲ್ಲಿ ತೀರ ಹಿಂದೆ ಬಿದ್ದಿದೆ. ಇಲ್ಲಿ ಅಸಂಖ್ಯಾತ ನಿರುದ್ಯೋಗಿ ಯುವಕರಿದ್ದರೂ ಇವರ ಕೈಗಳಿಗೆ ಕೆಲಸವಿಲ್ಲದಾಗಿದೆ. 1982ರಲ್ಲಿ ಬೀದರ್ ಜಿಲ್ಲೆಗೆ ಕೇಂದ್ರ ಸರ್ಕಾರ ನೋ ಇಂಡಸ್ಟ್ರೀ ಡಿಸ್ಟ್ರಿಕ್ಟ್ ಎಂದು ಘೋಷಿಸಿ ನಾನಾ ಯೋಜನೆ ಮುಖಾಂತರ ಇಲ್ಲಿ ಸಣ್ಣ, ಮಧ್ಯಮ ಗಾತ್ರದ ಕೈಗಾರಿಕೆಗಳನ್ನು ಸ್ಥಾಪಿಸಲು ಉದ್ಯಮದಾರರಿಗೆ ಸೆಳೆಯಲು ಪ್ರಯತ್ನಿಸಲಾಯಿತು. ಆದರೆ ಇದು ನಿರೀಕ್ಷಿತ ಫಲ ನೀಡಲಿಲ್ಲ.

ಬೀದರ್ ಜಿಲ್ಲೆಯಲ್ಲಿ ದೊಡ್ಡ ಕಾರ್ಖಾನೆ ಸ್ಥಾಪಿಸಲು ಸಾಕಷ್ಟು ಪೂರಕ ವಾತಾವರಣವಿದೆ. ಬೀದರ್ ಕೊಳಾರ್ ಕೈಗಾರಿಕಾ ಪ್ರದೇಶ, ಹುಮನಾಬಾದ್ ಕೈಗಾರಿಕಾ ಪ್ರದೇಶದಲ್ಲಿ ಈಗಾಗಲೇ ಭೂಮಿ ಲಭ್ಯವಿದೆ. ಹೆಚ್ಚಿನ ಭೂಮಿ ಬೇಕಾಗಿದ್ದರೂ ಸಿಗುತ್ತದೆ. ಇನ್ನು ಜಿಲ್ಲೆಯು ಅತ್ಯುತ್ತಮ ಸಂಪರ್ಕ ವ್ಯವಸ್ಥೆ ಹೊಂದಿದೆ. ರಾಷ್ಟ್ರೀಯ ಹೆದ್ದಾರಿ, ರೈಲ್ವೆ ಕನೆಕ್ಟಿವಿಟಿಯಿದೆ. ಏರ್ ಪೊ?ರ್ಟ್ ಇದೆ. ನೀರಿನ ಸಮಸ್ಯೆ ಸಹ ಇಲ್ಲ. ಹೀಗಾಗಿ ಬಂಡವಾಳ ಹೂಡಿಕೆದಾರರಿಗೆ ಜಿಲ್ಲೆಗೆ ಸೆಳೆಯುವುದು ಕಷ್ಟದ ಕೆಲಸವಲ್ಲ. ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಸಹ ಇಲ್ಲಿ ದೊಡ್ಡ ಕೈಗಾರಿಕೆ ಸ್ಥಾಪನೆ ಮಾಡಬಹುದು. ಇಚ್ಛಾಶಕ್ತಿ ಪ್ರದರ್ಶಿಸಿದರೆ ಹತ್ತಾರು ಸಾವಿರ ಜನರಿಗೆ ಉದ್ಯೋಗ ಕೊಡುವ ಬೃಹತ್ ಕಾರ್ಖಾನೆ ಇಲ್ಲಿ ಸ್ಥಾಪನೆ ಮಾಡಬಹುದಾಗಿದೆ. ಬೀದರ್ ಜಿಲ್ಲೆಯು ದೇಶದಲ್ಲೇ ಅತ್ಯಧಿಕ ಸೋಯಾಬೀನ್ ಬೆಳೆಯುವ ಜಿಲ್ಲೆಯಾಗಿದೆ. ಪ್ರತಿ ವರ್ಷ ಸರಾಸರಿ 2 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಇಲ್ಲಿ



ಸೋಯಾಬೀನ್ ಬೆಳೆಯಲಾಗುತ್ತಿದೆ. ಬೀದರ್– ಕಲಬುರಗಿ ಜಿಲ್ಲೆಯಲ್ಲಿ ರಾಜ್ಯದಲ್ಲೇ ಅತಿ ಹೆಚ್ಚು ತೊಗರಿ ಬೆಳೆಯಲಾಗುತ್ತದೆ. ಇದನ್ನು ಸಹ ಬಳಸಿಕೊಂಡು ಉದ್ಯಮ ಸ್ಥಾಪನೆ ಮಾಡಲು ಸಾಕಷ್ಟು ಅವಕಾಶಗಳಿವೆ.

ಬೀದರ್ ಜಿಲ್ಲೆಯಲ್ಲಿ ಪ್ರತಿ ವರ್ಷ ಜಿಲ್ಲೆಯಲ್ಲಿ 6 ಸಾವಿರ ವಿದ್ಯಾರ್ಥಿಗಳು ಪದವಿಯನ್ನು ಪಡೆಯುತ್ತಿದ್ದಾರೆ. ಮಾನವ ಸಂಪನ್ಮೂಲಕ್ಕೆ ಕೊರತೆಯೇ ಇಲ್ಲ. 2006ರಲ್ಲಿ ತಾವು ಮುಖ್ಯಮಂತ್ರಿಯಾಗಿದ್ದಾಗ ಬೀದರ್ ನಲ್ಲಿ 2000 ಕೋಟಿ ರೂ. ವೆಚ್ಚದಲ್ಲಿ ಅಪರೇಲ್ ಪಾಕ9 (ಸಿದ್ಧ ಉಡುಪುಗಳ ತಯಾರಿಕೆ ಘಟಕ) ಸ್ಥಾಪಿಸುವ ಬಗ್ಗೆ ಬಜೆಟ್ ನಲ್ಲೇ ಘೋಷಣೆ ಮಾಡಲಾಗಿತ್ತು. ಆದರೆ ಅದು ಕಾರ್ಯಗತವಾಗಲಿಲ್ಲ. ಗಡಿ ಭಾಗದ ಜನರ ಸಮಸ್ಯೆಗೆ ಪರಿಹರಿಸುವ ನಿಟ್ಟಿನಲ್ಲಿ ಬೀದರ್ ಜಿಲ್ಲೆಯಲ್ಲಿ ಪ್ರತ್ಯಕ್ಷವಾಗಿ 10 ಸಾವಿರ ಜನರಿಗೆ ಉದ್ಯೋಗ ಕಲ್ಪಿಸುವ ಹಾಗೂ ಪರೋಕ್ಷವಾಗಿ 1 ಲಕ್ಷ ಜನರಿಗೆ ಅನುಕೂಲವಾಗುವಂಥ ದೊಡ್ಡ ಕಾರ್ಖಾನೆ ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕು.

ಬೀದರ್ ಜಿಲ್ಲೆಗೆ ವಿಶೇಷ ಆರ್ಥಿಕ ವಲಯ (ಎಸ್ ಇ ಝಡ್) ಎಂದು ಘೋಷಿಸುವ ಅಗತ್ಯವಿದೆ. ಇದರ ಜೊತೆಗೆ ಬೀದರ್ ಜಿಲ್ಲೆಗೆ ಮುಕ್ತ ವ್ಯಾಪಾರ ಪ್ರದೇಶ ಎಂದು ಗುರುತಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ

## ಮೈಸೂರಿನ ಅಂಧ ಹಾಗೂ ಶ್ರವಣದೋಷ ಕೇಂದ್ರದಿಂದ ಡಿಎಡ್ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು,ಜು.4–** ಮೈಸೂರಿನಲ್ಲಿ ರಾಜ್ಯ ಸರ್ಕಾರದ ವತಿಯಿಂದ ನಡೆಸಲಾಗುತ್ತಿರುವ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಕೇಂದ್ರದಲ್ಲಿ ಅಂಧ ಮತ್ತು ಶ್ರವಣದೋಷವುಳ್ಳ ಮಕ್ಕಳಿಗೆ ಶಿಕ್ಷಕರಾಗಲು 2 ವರ್ಷಗಳ ವಿಶೇಷ ಡಿ.ಎಡ್ ತರಬೇತಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಇಲ್ಲಿ ತರಬೇತಿ ಪಡೆದ ಅಭ್ಯರ್ಥಿಗಳು ರಾಜ್ಯ ಸರ್ಕಾರದ ಸಾಮಾನ್ಯ ಶಾಲೆ ಮತ್ತು ವಿಶೇಷ ಶಾಲೆಗಳಲ್ಲಿ, ವಿಕಲಚೇತನರ ಇಲಾಖೆಯ ಅಡಿಯಲ್ಲಿ ಬರುವ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ, ಸಿಬಿಎಸ್‌ಸಿ ಶಾಲೆಗಳಲ್ಲಿ ಮತ್ತು ಸರ್ವ ಶಿಕ್ಷಣ ಅಭಿಯಾನದಲ್ಲಿ ಸಂಪನ್ಮೂಲ ಶಿಕ್ಷಕರಾಗಬಹುದು ಜೊತೆಗೆ ಜಿಲ್ಲಾ ಆಸ್ಪತ್ರೆಗಳಲ್ಲಿ ಅಥವಾ ರಾಷ್ಟ್ರೀಯ ಸಂಸ್ಥೆಗಳು ಹಾಗೂ ಪ್ರಾದೇಶಿಕ ಸಂಸ್ಥೆಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಕಾರ್ಯ ನಿರ್ವಹಿಸಬಹುದು, ಮಾತಿನ ತರಬೇತಿ ಘಟಕಗಳಲ್ಲೂ ಕಾರ್ಯ ನಿರ್ವಹಿಸಬಹುದಾಗಿದೆ.

ಈ ವಿಶೇಷ ಡಿ.ಎಡ್ ಸಾಮಾನ್ಯ ಡಿ.ಇಡ್ ಗೆ ಸಮಾನಾಂತರವಾಗಿವೆ. ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಶೇ.50 (ಎಸ್.ಸಿ. ಎಸ್.ಟಿ. ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಶೇ.45) ಅಂಕಗಳೊಂದಿಗೆ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು ವೆಬ್‌ಸೈಟ್ ವಿಳಾಸ: https://nber-rehabcouncil.gov.in ನಲ್ಲಿ ಜುಲೈ 12 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ಸರ್ಕಾರಿ ತರಬೇತಿ ಕೇಂದ್ರದ ಉಪ ನಿರ್ದೇಶಕರು (ತರಬೇತಿ) ಅವರ ಕಚೇರಿ, ಪುಲಕೇಶಿ ರಸ್ತೆ, ತಿಲಕ್‌ನಗರ, ಮೈಸೂರು–570001, ದೂರವಾಣಿ ಸಂಖ್ಯೆ: 0821–2491600 ತರಬೇತಿ ಸಂಯೋಜಕರು: ಆಶಾ ವಿ. ಹಿರೇಮಠ್: 9113561620, ಟಿ.ಡಿ.ಮಂಜುನಾಥ: 9686762378ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೂರ್ವಭಾವಿ ಸಭೆ ಇಂದು

**ರಾಯಚೂರು,ಜು.4–**ಇಲ್ಲಿನ ಸಮಾಜ ಕಲ್ಯಾಣ ಇಲಾಖೆಯಿಂದ ರಾಯಚೂರು ನಗರದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನ ರಾಮ್ ಅವರ ವೃತ್ತದ ಅಭಿವೃದ್ಧಿ ಹಾಗೂ ಉನ್ನತೀಕರಣ ಕಾಮಗಾರಿಗಳ ಕುರಿತು ಚರ್ಚಿಸಲು ಪೂರ್ವಭಾವಿ ಸಭೆಯು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜುಲೈ 5ರ ಸಂಜೆ 4 ಗಂಟೆಗೆ ನಡೆಯಲಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಗೆ ಜಿಲ್ಲೆಯ ವಿವಿಧ ಸಂಘ–ಸಂಸ್ಥೆಗಳ ಮುಖಂಡರು, ದಲಿತ ಸಮುದಾಯಗಳ ಮುಖಂಡರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಎನ್.ಜಿ.ಓ. ಸಂಸ್ಥೆಯವರು ಭಾಗವಹಿಸಿ ತಮ್ಮ ಸಲಹೆ ಸೂಚನೆಗಳನ್ನು ನೀಡುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಚಿದಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 5, 6ರಂದು ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

**ರಾಯಚೂರು,ಜು.4–** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗ–1 ಹಾಗೂ 2ರ ವ್ಯಾಪ್ತಿಗೆ ಬರುವ ಡ್ಯಾಡಿ ಕಾಲೋನಿಯ ರಸ್ತೆ ಅಗಲೀಕರಣ ಕಾಮಗಾರಿ ಕೈಗೊಳ್ಳುತ್ತಿರುವ ಪ್ರಯುಕ್ತ ಜುಲೈ 05 ಹಾಗೂ 06ರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ನಿಗಧಿತ ದಿನದಂದು ಬೆಳಗ್ಗೆ 10ರಿಂದ ಡ್ಯಾಡಿ ಕಾಲೋನಿ, ಸರ್ಕಾರಿ ಪದವಿ ಕಾಲೇಜು, ಪಿ.ಸಿ.ಬಿ ಕಾಲೋನಿ, ಡುಂಬಾ ಕಾಲೋನಿ, ಸಿಟಿ ಕ್ಲಬ್, ಅಲ್ಲಿ ನಾಯಕ್ ಕಾಲೋನಿ, ಗುರು ಬಸವ ಕಾಲೋನಿ, ಕಾಕತೀಯ ಕಾಲೋನಿ, ಶಾಂತಿ ಕಾಲೋನಿ, ಡಾಲರ್ಸ ಕಾಲೋನಿ, ರಾಯಚೂರು ಒಳ ಚರಂಡಿ ನೀರು ಮತ್ತು ಸಂಬಂಧಿಸಿದ ಪ್ರದೇಶಗಳು ಸೇರಿದಂತೆ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–226386, 08532–231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗ–1 ಹಾಗೂ 2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 7ರಂದು ಫೋನ್ ಇನ್ ಕಾರ್ಯಕ್ರಮ

**ರಾಯಚೂರು,ಜು.4–** ಇಲ್ಲಿನ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ರಾಯಚೂರು ವಿಭಾಗದಲ್ಲಿ ಸಾರಿಗೆ ಸೌಲಭ್ಯ ಕುರಿತು ಸಾರ್ವಜನಿಕರು, ಶಾಲಾ–ಕಾಲೇಜು ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಹರಿಸಲು ಹಾಗೂ ಸಾರ್ವಜನಿಕ ಪ್ರಯಾಣಿಕರಿಗೆ ಸಮರ್ಪಕ ಸಾರಿಗೆ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಜುಲೈ 7 ರಂದು ಮಧ್ಯಾಹ್ನ 04 ರಿಂದ 05 ರವರೆಗೆ ಫೋನ್ ಇನ್ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ಸಾರ್ವಜನಿಕ ಪ್ರಯಾಣಿಕರು, ವಿದ್ಯಾರ್ಥಿಗಳು ಬಸ್‌ನ ಸೌಲಭ್ಯ ಹಾಗೂ ಕುಂದುಕೊರತೆ ಸಲಹೆಗಳಿದ್ದಲ್ಲಿ ದೂರವಾಣಿ ಸಂಖ್ಯೆ: 6366423883ಗೆ ಸಂಪರ್ಕಿಸಬಹುದಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**